ಸಂಪುಟ : 10 ಸಂಚಿಕೆ: 193 ಪುಟ : 4+2 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 09 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 193 Pages : 4+2 Price : 3.00 Tuesday September 09 2025 Gadag RNINo: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಅತಿವೃಷ್ಟಿಯಿಂದಾದ ಹಾನಿ ಕುರಿತು ಮುಖ್ಯಮಂತ್ರಿಗಳಿಂದ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಸಭೆ

# ಬೆಳೆ ಹಾನಿಯ ಜಂಟಿ ಸಮೀಕ್ಷೆ ಶೀಘ್ರ ಪೂರ್ಣಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಾದ್ಯಂತ ಅತಿವೃಷ್ಟಿಯಿಂದಾದ ಹಾನಿ ಹಾಗೂ ತೆಗೆದುಕೊಂಡ ಕ್ರಮಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದರು.



ಸಭೆಯಲ್ಲಿ ಪೂರ್ವ ಮುಂಗಾರು (1–4–25 ರಿಂದ 31–5–25) ಮಳೆಯಿಂದಾದ ಕೃಷಿ, ತೋಟಗಾರಿಕೆ ಬೆಳೆ ಹಾನಿ, ಮನೆ ಹಾನಿ, ಪ್ರವಾಹ, ಸಿಡಿಲಿನಿಂದಾದ ಜೀವಹಾನಿ, ಜಾನುವಾರು ಪ್ರಾಣ ಹಾನಿ, ಪರಿಹಾರ ವಿತರಣೆ, ವಿವಿಧ ಜಲಾಶಯಗಳ ದುರಸ್ತಿ ಇರುವ ಕ್ರಸ್ಟ್ ಗೇಟ್‌ಗಳ ಮಾಹಿತಿ, ರೈತರಿಗೆ ಅವಶ್ಯಕ ಬೀಜ, ರಸಗೊಬ್ಬರ, ಕೀಟನಾಶಕಗಳ ಬೇಡಿಕೆ, ರಸ್ತೆ ಹಾಗೂ ಮೂಲಸೌಕರ್ಯಗಳ ಹಾನಿ ಕುರಿತು ಮಾಹಿತಿ ಪಡೆದರು.

ಇದೇ ಸಂದರ್ಭದಲ್ಲಿ ಬೆಳೆ ಹಾನಿಗೆ ಸಂಬಂಧಿಸಿದಂತೆ ಜಂಟಿ ಸಮೀಕ್ಷೆ ಬಗ್ಗೆ ದೃಢೀಕರಿಸಿ, 10 ದಿನಗಳರೊಳಗೆ ಸಮೀಕ್ಷೆ ವರದಿ ಸಲ್ಲಿಸಬೇಕು. ಮನೆಹಾನಿ, ಪ್ರಾಣ ಹಾನಿ, ಜಾನುವಾರು ಹಾನಿ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಕಲ್ಪಿಸಲು ಸೂಚಿಸಿ, ರೈತರಿಗೆ ಬೀಜ, ರಸಗೊಬ್ಬರ, ಕೀಟನಾಶಕಗಳ ಪೂರೈಕೆ ಬಗ್ಗೆಯೂ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿಗಳು ಸೂಚಿಸಿದರು.

ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಆದ ಹಾನಿ ಕುರಿತು ಮಾಹಿತಿ ನೀಡಿ, ಬೆಳೆ ಹಾನಿಗೆ ಸಂಬಂಧಿಸಿದಂತೆ ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿ ನಡೆಯುತ್ತಿದೆ. ಗದಗ ಜಿಲ್ಲೆಯಲ್ಲಿ 93709 ಸಾವಿರ ಹೆಕ್ಟೇರ್ ಪ್ರದೇಶ ಕೃಷಿ ಹಾಗೂ 7454 ಸಾವಿರ ಹೆಕ್ಟೇರ್ ಪ್ರದೇಶದ ತೋಟಗಾರಿಕೆ ಸೇರಿ ಒಟ್ಟು ಜಿಲ್ಲೆಯಲ್ಲಿ 1.01 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿನ ಬೆಳೆ ಹಾನಿಯಾಗಿದೆ. 183 ಮನೆಗಳಿಗೆ ಭಾಗಶಃ ಹಾನಿಯಾಗಿದ್ದು, ಈವರೆಗೆ ಮಾರ್ಗಸೂಚಿಯನ್ವಯ 28.04 ಲಕ್ಷ ರೂ ಪರಿಹಾರ ನೀಡಲಾಗಿದೆ. ಜಿಲ್ಲೆಯಲ್ಲಿ ವಾಡಿಕೆ ಮಳೆಗಿಂತ ಶೇ. 33ರಷ್ಟು ಅಧಿಕ ಮಳೆಯಾಗಿದೆ ಎಂದು ವಿವರಿಸಿದರು.

> ಗದಗ ಜಿಲ್ಲೆಯಲ್ಲಿ ಬೆಳೆದ ಹೆಸರು ಬೆಳೆ ಇನ್ನೇನು ಕೈಗೆ ಸಿಗುತ್ತದೆ ಎಂಬ ನಿರೀಕ್ಷೆಯಲ್ಲಿದ್ದ ರೈತರಿಗೆ ಅತಿವೃಷ್ಟಿಯಿಂದಾಗಿ ಹೆಸರು ಬೆಳೆ ಸಂಪೂರ್ಣವಾಗಿ ಹಾನಿಗೀಡಾಗಿದೆ. ಇದರಿಂದ ರೈತರಿಗೆ ಅಪಾರ ಹಾನಿಯಾಗಿದ್ದು, ಶೀಘ್ರವಾಗಿ ಜಂಟಿ ಸಮೀಕ್ಷೆ ಕೈಗೊಂಡು ಪರಿಹಾರ ತಂತ್ರಾಂಶದಲ್ಲಿ ನೋಂದಣಿ ಮಾಡಲು ಈಗಾಗಲೇ ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ. ಬೆಳೆ ಹಾನಿಗೀಡಾದ ರೈತರಿಗೆ ಸರ್ಕಾರದಿಂದ ಪರಿಹಾರ ಒದಗಿಸಲಾಗುವುದು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ ತಿಳಿಸಿದರು.

> ಜಿಲ್ಲೆಯಲ್ಲಿ 3.12 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಇತ್ತು. ಶೇ. 108ರಷ್ಟು ಗುರಿ ಸಾಧನೆಯಾಗಿದ್ದು, 1.49 ಲಕ್ಷ ಹೆಕ್ಟೇರ್ ಹೆಸರು ಬೆಳೆ ಹಾಗೂ 93 ಸಾವಿರ ಹೆಕ್ಟೇರ್ ಪ್ರದೇಶದಲ್ಲಿನ ಇತರೆ ಬೆಳೆಗಳಿಗೆ ಹಾನಿಯಾಗಿದೆ. ಇದರಿಂದಾಗಿ ಜಿಲ್ಲೆಯ ಒಟ್ಟಾರೆ 94 ಸಾವಿರ ರೈತರು ಹಾನಿ ಅನುಭವಿಸಿದ್ದಾರೆ ಎಂದು ಡಿಸಿ ಸಿ.ಎನ್. ಶ್ರೀಧರ ಮಾಹಿತಿ ಒದಗಿಸಿದರು.




ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಎಸಿ ಗಂಗಪ್ಪ ಎಂ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ. ಹುಲಗಣ್ಣವರ, ತೋಟಗಾರಿಕೆ ಉಪನಿರ್ದೇಶಕ ಶಶಿಕಾಂತ ಕೋಟೆಮನಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸೆ.11,12ರಂದು ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಹಯೋಗದಲ್ಲಿ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ( ಫುಟ್‌ಬಾಲ್ ಮತ್ತು ಹಾಕಿ ) ಸೆಪ್ಟೆಂಬರ್ 11 ಹಾಗೂ 12 ರಂದು ಜರುಗಲಿವೆ.

ಫುಟ್‌ಬಾಲ್ ಕ್ರೀಡಾಕೂಟ ಸೆಪ್ಟೆಂಬರ್ 11 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗುವುದು. ಹಾಗೂ ಹಾಕಿ ಕ್ರೀಡಾಕೂಟ ಸೆಪ್ಟೆಂಬರ್ 11 ರಂದು ಬೆಳಿಗ್ಗೆ 9 ಗಂಟೆಗೆ ಬೆಟಗೇರಿಯ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಜರುಗುವುದು.

ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದ ಉದ್ಘಾಟನಾ ಸಮಾರಂಭವು ಸೆಪ್ಟೆಂಬರ್ 11 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ▶▶ 3ನೇ ಪುಟಕ್ಕೆ

### ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಪೂರ್ವಭಾವಿ ಸಭೆ

# ಕ್ರೀಡಾ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಮಾರ್ಗ ಸೂಚಿಯನ್ವಯ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಅಕ್ಟೋಬರ್ 1ರಂದು ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಚರಿಸಲಾಗುವುದು. ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಪ್ರಯುಕ್ತ ಹಿರಿಯ ನಾಗರಿಕರಿಗಾಗಿ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಸೆಪ್ಟೆಂಬರ್ 19ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ವ್ಯವಸ್ಥಿತವಾಗಿ ಏರ್ಪಡಿಸಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಕೆ. ಮಹಾಂತೇಶ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ವಿಡಿಯೋ ಕಾನ್ಫರನ್ಸ್ ಹಾಲ್‌ನಲ್ಲಿ ಸೋಮವಾರ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಪ್ರಯುಕ್ತ ಜರುಗಿದ ಪೂರ್ವಭಾವಿ ಸಭೆಯಲ್ಲಿ ವರು ಮಾತನಾಡಿದರು.

ಸೆ.19ರಂದು ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಹಿರಿಯ ನಾಗರಿಕರಿಗಾಗಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಮಹಿಳೆಯರು ಮತ್ತು ಪುರುಷರಿಗಾಗಿ ಪ್ರತ್ಯೇಕವಾಗಿ ಏರ್ಪಡಿಸಲಾಗುವುದು. ಮಹಿಳೆಯರಿಗೆ ಮತ್ತು ಪುರುಷರಿಗಾಗಿ 60–69, 70–79 ಹಾಗೂ 80 ವರ್ಷ ಮೇಲ್ಪಟ್ಟವರಿಗೆ ಹೀಗೆ ವಿಭಾಗಗಳನ್ನು ಮಾಡಲಾಗಿದ್ದು,




ಕ್ರೀಡಾ ಸ್ಪರ್ಧೆಯಲ್ಲಿ ಬಿರುಸಿನ ನಡಿಗೆ, ಬಕೆಟ್‌ನಲ್ಲಿ ಬಾಲ್ ಎಸೆಯುವುದು, ಮ್ಯೂಸಿಕಲ್ ಚೇರ್ ಸ್ಪರ್ಧೆಗಳನ್ನು ಆಯೋಜಿಸಲಾಗುವುದು.

60–69, 70–79 ಹಾಗೂ 80 ವರ್ಷ ಮೇಲ್ಪಟ್ಟ ಮಹಿಳೆಯರಿಗೆ ಹಾಗೂ ಪುರಷರಿಗಾಗಿ ಸಾಂಸ್ಕೃತಿಕ ಸ್ಪರ್ಧೆಗಳಾದ ಏಕಪಾತ್ರ ಅಭಿನಯ ಹಾಗೂ ಗಾಯನ ಸ್ಪರ್ಧೆಗಳನ್ನು ಏರ್ಪಡಿಸಲಾಗುವುದು. ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿದ ಹಿರಿಯ ನಾಗರಿಕರು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸುವಂತಿಲ್ಲ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಸಮಾರಂಭದಲ್ಲಿ ಬಹುಮಾನ ವಿತರಿಸಲಾಗುವುದು ಎಂದು ಕೆ.ಮಹಾಂತೇಶ್ ತಿಳಿಸಿದರು.


ಸಭೆಯಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಪ್ರಯುಕ್ತ ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣ, ವೇದಿಕೆ ವ್ಯವಸ್ಥೆ, ಉಪಹಾರ ವ್ಯವಸ್ಥೆ, ಆಸನದ ವ್ಯವಸ್ಥೆ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ, ಗದಗ ಜಿಲ್ಲಾ ಹಿರಿಯ ನಾಗರಿಕರ ಸಂಘದ ಅಧ್ಯಕ್ಷ ಜಿ.ಎಸ್. ಹಿರೇಮಠ, ಕ.ರಾ.ಹಿ.ನಾ ಹಾಗೂ ನಿ.ನೌ ಸಂಘದ ಎಸ್.ಕೆ. ಖಂಡಪ್ಪಗೌಡ್ರ, ಗದಗ ಪ್ರೊಬಸ್ ಕ್ಲಬ್ ಅಧ್ಯಕ್ಷ ಬಿ.ಎಸ್. ಗೌಡರ, ಜಿ.ಎಂ. ಯನಮಶೆಟ್ಟಿ, ಡಾ.ರಾಜೇಂದ್ರ ಗೋಡಬೋಲೆ, ಗದಗ ಜಿಲ್ಲಾ ಬ್ಯಾಂಕ್ ನಿವೃತ್ತರ ಸಂಘದ ಅಧ್ಯಕ್ಷ ಬಸವರಾಜ ತೋಟಗೇರ, ಹಿರಿಯ ನಾಗರಿಕರ ಸಂಘದ ತಾಲೂಕು ಘಟಕದ ಅಧ್ಯಕ್ಷರು, ಹಿರಿಯ ನಾಗರಿಕರು, ಗಣ್ಯರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಮಾತನಾಡಿ, ವಿಶ್ವ ಹಿರಿಯ ನಾಗರಿಕರಿಗಾಗಿ ಹಮ್ಮಿಕೊಳ್ಳಲಾಗಿರುವ ಕ್ರೀಡೆಯಲ್ಲಿ ಹಿರಿಯ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಉತ್ಸಾಹದಿಂದ ಪಾಲ್ಗೊಳ್ಳಬೇಕೆಂದು ತಿಳಿಸಿದರು.

### ಗಣೇಶ ಮೂರ್ತಿ ವಿಸರ್ಜನಾ ಕಾರ್ಯಕ್ರಮದಲ್ಲಿ ಸಿಪಿಐ ನಾಗರಾಜ ಮಾಡಳ್ಳಿ

## ಡಿ.ಜೆ ನಮ್ಮ ಸಂಸ್ಕೃತಿಯಲ್ಲ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೋಮೇಶ್ವರ ತೇರಿನಮನೆಯ ಹತ್ತಿರ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿ ವಿಸರ್ಜನಾ ಕಾರ್ಯಕ್ರಮ ಸೋಮವಾರ ಸಾಂಸ್ಕೃತಿಕ ವಾದ್ಯ ಮೇಳಗಳ ವಿಜೃಂಭಣೆಯೊಂದಿಗೆ ಶ್ರದ್ಧಾ, ಭಕ್ತಿಯಿಂದ ನೆರವೇರಿತು.

ಮೆರವಣಿಗೆಗೆ ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ನಾಗರಾಜ ಗಡಾದ, ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ ಚಾಲನೆ ನೀಡಿದರು. ಈ ವೇಳೆ ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿ, ವಿಘ್ನನಿವಾರಕ ಗಣೇಶನ ಹಬ್ಬವನ್ನು ಪಟ್ಟಣದಲ್ಲಿ ಎಲ್ಲೆಡೆ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಪ್ರಸಾದ ಸೇವೆಯ ಅದ್ದೂರಿಯಾಗಿ ಆಚರಿಸುತ್ತಿರುವದು ಮೆಚ್ಚುಗೆಯ ಸಂಗತಿಯಾಗಿದೆ. ಹಬ್ಬಗಳು ನಮ್ಮ ಸಂಸ್ಕೃತಿ, ಸಂಪ್ರದಾಯಗಳ ಪ್ರತೀಕವಾಗಿವೆ. ಡಿಜೆ ನಮ್ಮ ಸಂಸ್ಕೃತಿಯಲ್ಲ. ಬದಲಾಗಿ ಅಬ್ಬರದ ಡಿಜೆ ಬಳಕೆಯಿಂದ ಹಸುಗೂಸುಗಳು, ಗರ್ಭಿಣಿಯರು, ಪುಟಾಣಿ ಮಕ್ಕಳು, ಹಿರಿಯರು, ಆರೋಗ್ಯ ಸಮಸ್ಯೆ ಇರುವವರು ಸೇರಿ ಎಲ್ಲರಿಗೂ ತೊಂದರೆಯಾಗುತ್ತದೆ. ಆದ್ದರಿಂದ ಡಿಜೆ ಬದಲಾಗಿ ನಮ್ಮ ನಾಡಿನ ಜಾನಪದ ಕಲಾ ತಂಡಗಳೊಂದಿಗೆ ಗಣೇಶ ವಿಸರ್ಜನೆ ಮಾಡಿದರೆ ನಮ್ಮ ಸಂಸ್ಕೃತಿ, ಕಲೆಯನ್ನು ಉಳಿಸಿದಂತಾಗುತ್ತದೆ. ಹಬ್ಬದ ಆಚರಣೆಗಳು ▶▶ 3ನೇ ಪುಟಕ್ಕೆ

> ಹಾವೇರಿ ಜಿಲ್ಲೆಯ ಜಾಂಜ್ ಮೇಳದ ನಾದ ವೈವಿಧ್ಯ, ಲಕ್ಷ್ಮೇಶ್ವರದ ಕುದುರೆಕಾರರ ಕುಣಿತ, ನಂದಿಕೋಲ ಕುಣಿತದ ಕಲಾ ತಂಡಗಳು ಮೆರವಣಿಗೆಯ ವೈಭವವನ್ನು ಹೆಚ್ಚಿಸಿದವು. ಜೊತೆಗೆ ದೊಡ್ಡ ಮತ್ತು ಸಣ್ಣ ಗೊಂಬೆಗಳ ವೇಷಧಾರಿಗಳು ನಾದಕ್ಕೆ ತಕ್ಕಂತೆ ಕುಣಿದು ತಮ್ಮೊಂದಿಗೆ ಜನರನ್ನು ಕುಣಿಯುವಂತೆ ಪ್ರೇರೇಪಿಸುತ್ತಾ ಮೆರವಣಿಗೆಯಲ್ಲಿ ಆಕರ್ಷಣೆ ಹೆಚ್ಚಿಸಿದರು.

### ಡಾ. ವೀರಪ್ಪ ಸಂಕನೂರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಪ್ರತಿಭಾ ಪುರಸ್ಕಾರ

## ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ

■ ವಿಜಯಸಾಕ್ಷಿ ಸುದ್ದಿ, ರೋಣ

ಇಂದಿನ ಸ್ಪರ್ಧಾತ್ಮಕ ದಿನಗಳಲ್ಲಿ ನಮ್ಮ ವಿದ್ಯಾರ್ಥಿಗಳು ರಾಜ್ಯ ಮತ್ತು ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಬೇಕಾಗಿದ್ದು, ಅವರು ಯಶಸ್ಸು ಪಡೆಯಲು ಗುಣಮಟ್ಟದ ಶಿಕ್ಷಣ ನೀಡುವ ಅವಶ್ಯವಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಕರು ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಕರೆ ನೀಡಿದರು.

ಅವರು ನಿಡಗುಂದಿಯ ಡಾ. ವೀರಪ್ಪ ಸಂಕನೂರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ವರ್ಷದ ಪಠ್ಯೇತರ ಚಟುವಟಿಕೆ ಹಾಗೂ ಪ್ರತಿಭಾ ಪುರಸ್ಕಾರ ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ,



ವಿದ್ಯಾರ್ಥಿಗಳು ಕೇವಲ ಪಠ್ಯಕ್ಕೆ ಸೀಮಿತವಾಗದೇ, ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಭಾಗವಹಿಸಿ ಸರ್ವತೋಮುಖ ಬೆಳೆವಣಿಗೆ ಹೊಂದಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಪ್ರಾಧ್ಯಾಪಕ ಸುಭಾಸ ಸಂಕನೂರ ವಹಿಸಿದ್ದರು. ನಿಡಗುಂದಿಕೊಪ್ಪದ ಶ್ರೀ ಮ.ನಿ.ಪ್ರ ಅಭಿನವ ಚನ್ನಬಸವ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ಕಾಲೇಜಿನ ಪ್ರಾಚಾರ್ಯ ಎಸ್.ಆರ್. ಕರಮುಡಿ ಸೇರಿದಂತೆ ಸಿಬ್ಬಂದಿಗಳು ಹಾಗೂ ಮುಖಂಡರು ಕಾಲೇಜಿನಲ್ಲಿ ವಿಜ್ಞಾನ ವಿಷಯ ಪ್ರಾರಂಭಿಸಲು ಮತ್ತು ನಿಡಗುಂದಿಯಲ್ಲಿ ಬಿ.ಸಿ.ಎಮ್ ಹಾಸ್ಟೆಲ್ ತೆರೆಯಲು ಶಾಸಕರಿಗೆ ಮನವಿ ಸಲ್ಲಿಸಿದರು.

2025ರ ದ್ವಿತೀಯ ಪಿಯುಸಿ ಪರಿಕ್ಷೆಯಲ್ಲಿ ಕಾಲೇಜಿಗೆ ಪ್ರಥಮ ಸ್ಥಾನ ಪಡೆದ ಕಾವೇರಿ ರಾಮಶೆಟ್ಟಿ, ದ್ವಿತೀಯ ಸ್ಥಾನ ಪಡೆದ ಶಾಹಿನಾ ನದಾಫ್, ತೃತೀಯ ಸ್ಥಾನ ಪಡೆದ ಇಮಾಂಬಿ ಮುಮ್ಮನವರ ಇವರುಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಗ್ರಾ.ಪಂ ಅಧ್ಯಕ್ಷೆ ಗೀತಾ ಕುಕನೂರ, ಜಗದೀಶ್ ಕರಡಿ, ವಿ.ಆರ್. ಗುಡಿಸಾಗರ ವಕೀಲರು, ಡಾ. ಸಂಗಪ್ಪ ಸಂಕನೂರ, ಅಂದಪ್ಪ ಬಿಳ್ಳೂರ, ಶಶಿಧರ ಹೊಟ್ಟಿನ್, ಶಿವಪ್ಪ ಸೂಡಿ, ಧರ್ಮಪ್ಪ ಕೊಪ್ಪದ್ ಮತ್ತು ಪಂಚಪ್ಪ ಕರಡಿ ವೇದಿಕೆಯಲ್ಲಿದ್ದರು. ಎನ್.ಟಿ. ಮಾಳೋದೆ ಸ್ವಾಗತಿಸಿದರು. ಆರ್.ಎಚ್. ಶಿಂಧೆ ಕಾರ್ಯಕ್ರಮ ನಿರೂಪಿಸಿದರು. ಬಸವರಾಜ ಇಟಗಿ ವಂದಿಸಿದರು.

> ವಿ.ಪ ಸದಸ್ಯ ಎಸ್.ವಿ. ಸಂಕನೂರ ಹಾಗೂ ಅವರ ಸಹೋದರರು ತಂದೆ ವೀರಪ್ಪ ಸಂಕನೂರ ಹಾಗೂ ತಾಯಿ ಶಾಂತಮ್ಮ ಸಂಕನೂರ ಇವರ ಸ್ಮರಣಾರ್ಥ ಪ್ರತಿ ವರ್ಷ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಾಲೇಜಿಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದವರಿಗೆ ಪ್ರತಿ ವರ್ಷ ನಗದು ಬಹುಮಾನ ನೀಡಲು ಗ್ರಾಮೀಣ ಬ್ಯಾಂಕ್‌ನಲ್ಲಿ ರೂ. 1 ಲಕ್ಷ ಠೇವಣಿ ಮಾಡಿರುವುದನ್ನು ಶಾಸಕ ಜಿ.ಎಸ್. ಪಾಟೀಲ ಶ್ಲಾಘಿಸಿ ಅಭಿನಂದಿಸಿದರು.

## ಅಂತರರಾಜ್ಯ ಕಳ್ಳರ ಹೆಡೆಮುರಿ ಕಟ್ಟಿದ ದಾವಣಗೆರೆ ಪೊಲೀಸ್: ಸಿಬ್ಬಂದಿ ಕಾರ್ಯಕ್ಕೆ ಎಸ್ಪಿ ಮೆಚ್ಚುಗೆ!



■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಇಲ್ಲಿನ ವಿದ್ಯಾನಗರದ ಮನೆಯ ಇಂಟರ್ ಲಾಕ್ ಮುರಿದು ಕಳ್ಳತನ ಮಾಡಿದ್ದ ಕುಖ್ಯಾತ ಅಂತರರಾಜ್ಯ ಕಳ್ಳರನ್ನು ಬಂಧಿಸುವಲ್ಲಿ ದಾವಣಗೆರೆ ಪೊಲೀಸರು ಯಶಸ್ವಿಯಾಗಿದ್ದಾರೆ.

ರಾಜಸ್ಥಾನ ಮೂಲದ ಶ್ಯಾಮ್ ಸಿಂಗ್ (28) ಕವರ್ ಪಾಲ್(24) ಪ್ರತಾಪ್ ಸಿಂಗ್ (33) ಬಂಧಿತ ಆರೋಪಿಗಳು. ಆರೋಪಿಗಳು ಆಗಸ್ಟ್ 30 ರಂದು ವಿದ್ಯಾನಗರ ನಿವಾಸಿ ರಂಗನಾಥ ಅವರು ಕುಟುಂಬ ಸಮೇತ ಬೆಂಗಳೂರಿಗೆ ತೆರಳಿದ್ದ ವೇಳೆ, ಮನೆ ಗುಡಿಸಿ ಗುಂಡಾಂತರ ಮಾಡಿದ್ದರು. ಅಂದ್ರೆ ಮನೆಯಲ್ಲಿ 15 ಲಕ್ಷ 37 ಸಾವಿರ ಮೌಲ್ಯದ ಚಿನ್ನಾಭರಣ, ಬೆಳ್ಳಿ ಆಭರಣ ಎಗರಿಸಿ ಪರಾರಿ ಆಗಿದ್ದರು. ಈ ಸಂಬಂಧ ಪ್ರಕರಣದ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದ ಪೊಲೀಸರು, ಇದೀಗ ಖದೀಮರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಗುಜರಾತ್‌ನ ಸೂರತ್ ಸಿಟಿ ಸಾರೋಲಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳ್ಳರು ತಲೆಮರಿಸಿಕೊಂಡಿದ್ದರು. ಖಚಿತ ಮಾಹಿತಿ ಮೇರೆಗೆ ಸಾರೋಲಿ ಪೊಲೀಸ್ ಸಹಾಯದೊಂದಿಗೆ ಮೂವರ ಹೆಡೆಮುರಿ ಕಟ್ಟುವಲ್ಲಿ ದಾವಣಗೆರೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಆರೋಪಿಗಳ ವಿರುದ್ಧ ಹರಿಹರ, ಹಳಿಯಾಳ , ಧಾರವಾಡ, ತುಮಕೂರು ಬಡಾವಣೆ, ತಿಪಟೂರು, ಮಧ್ಯಪ್ರದೇಶದ ಭೂಪಾಲ್ ಸೇರಿದಂತೆ ವಿವಿಧ ಠಾಣೆಗಳಲ್ಲಿದ್ದ ಪ್ರಕರಣ ಬೆಳಕಿಗೆ ಬಂದಿದೆ. ಕಳ್ಳರ ಪತ್ತೆ ಕಾರ್ಯದಲ್ಲಿ ವಿದ್ಯಾನಗರ ಪೊಲೀಸ್ ಠಾಣೆ ಸಿಬ್ಬಂದಿಗೆ ಎಸ್ಪಿ ಉಮಾ ಪ್ರಶಾಂತ್ ಪ್ರಶಂಸೆ ವ್ಯಕ್ತಡಿಸಿದ್ದಾರೆ. ವಿದ್ಯಾನಗರದ ಪೊಲೀಸ್ ಠಾಣೆಯಲ್ಲಿ ಆರೋಪಿಗಳ ವಿರುದ್ಧ ಪ್ರಕರಣ ದಾಖಲಾಗಿದೆ.

### ಸೆ. 9ರಂದು ಬಸವ ಸಂಸ್ಕೃತಿ ಅಭಿಯಾನದ ರಥಯಾತ್ರೆ ಗದಗ ಜಿಲ್ಲೆಗೆ ಆಗಮಿಸುತ್ತಿರುವ ನಿಮಿತ್ತ ಲೇಖನ

# ಸಮ ಸಮಾಜದ ಪ್ರತಿಬಿಂಬ




'ಶರಣರ ಬರವೆಮಗೆ ಪ್ರಾಣ ಜೀವಾಳವಯ್ಯ' ಎನ್ನುವ ಮಾತೇ ಎಲ್ಲರ ಮನಕ್ಕೆ ಮುದ ನೀಡುವಂಥದ್ದು. ಯಾವುದೇ ಜಾತಿ-ಮತ-ಪಂಥ-ಲಿಂಗ ಭೇದಭಾವವಿಲ್ಲದೆ ಸಮ ಸಮಾಜದ ಸದೃಢತೆಯನ್ನು ಕಟ್ಟಿದ ಸಂಸ್ಕೃತಿ ಬಸವ ಸಂಸ್ಕೃತಿ. ಅಂತರಂಗ-ಬಹಿರಂಗ ಶುದ್ಧಿಯ ಮಾರ್ಗವನ್ನು ತೋರಿ ಮನುಷ್ಯನಾಗಿ ಬಾಳಲು ಬೇಕಾದ ಎಲ್ಲ ಮೌಲ್ಯಗಳನ್ನು ಜಗತ್ತಿಗೆ ಸಾರಿದ ಶರಣರು ನೀಡಿದ ವಚನ ಸಾಹಿತ್ಯ ಸರ್ವಕಾಲಕ್ಕೂ ಅವಶ್ಯ ಹಾಗೂ ಅನಿವಾರ್ಯವೂ ಕೂಡ.

ಇಂದಿನ ಆಧುನಿಕ ಜೀವನ ಶೈಲಿಯಲ್ಲಿ ನಮ್ಮ ಮೂಲ ಶರಣ ಸಂಸ್ಕೃತಿಯನ್ನೇ ಮರೆತು ನಡೆಯುವ ಮನುಜನಿಗೆ ಹಿಂದಿಗಿಂತಲೂ ಇಂದು ಶರಣ ಸಂಸ್ಕೃತಿಯ ಅನಾವರಣ ಅವಶ್ಯವಾಗಿದೆ. ಆ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರವು ಜಗಜ್ಯೋತಿ ಬಸವಣ್ಣನವರನ್ನು 'ಸಾಂಸ್ಕೃತಿಕ ನಾಯಕ' ಎಂದು ಘೋಷಣೆ ಮಾಡಿ ಒಂದು ವರ್ಷವಾದ ಹಿನ್ನೆಲೆಯಲ್ಲಿ ಇದೊಂದು ಐತಿಹಾಸಿಕ ಘಟನೆಯನ್ನು ನಾಡಿನಾದ್ಯಂತ ಪ್ರತಿಯೊಬ್ಬರ ಮನೆ ಮನಗಳಿಗೆ ಶರಣ ಸಂಸ್ಕೃತಿಯ ವಿಚಾರಧಾರೆಗಳನ್ನು ತಲುಪಿಸುವ ಅಭಿಯಾನವಾಗಿದೆ.

ಈ ಅಭಿಯಾನವು ಬಸವಣ್ಣನವರ ಜನ್ಮಸ್ಥಳವಾದ ಬಸವನ ಬಾಗೇವಾಡಿಯಿಂದ 2025ರ ಸೆಪ್ಟೆಂಬರ್ 1ರಿಂದ ಪ್ರಾರಂಭವಾಗಿ ಅಕ್ಟೋಬರ್ 5ಕ್ಕೆ ಬೆಂಗಳೂರಿನಲ್ಲಿ ಸಮಾರೋಪಗಳ್ಳಲಿದೆ. ಕರ್ನಾಟಕದ ಎಲ್ಲ ಜಿಲ್ಲೆಗಳಿಗೆ ಸಂಚರಿಸಿ ಶರಣ ಸಂಸ್ಕೃತಿಯ ಎಲ್ಲಾ ಪೂಜ್ಯರು, ಶರಣ ಬಂಧುಗಳು, ಸಮಸ್ತ ಬಸವ ಪರ ಸಂಘಟನೆಗಳು ಒಟ್ಟಾಗಿ ಈ ಅಭಿಯಾನದ ಆಶಯಗಳನ್ನು ಯಶಸ್ವಿಗೊಳಿಸುತ್ತಿವೆ. ಅಭಿಯಾನದ ಮುಖ್ಯ ಧ್ಯೇಯೋದ್ದೇಶಗಳು ಶರಣರ ವಿಚಾರಧಾರೆಗಳನ್ನು ಬಿತ್ತರಿಸುತ್ತಿವೆ. ವ್ಯಸನ ಮುಕ್ತ ಸಮಾಜದ ನಿರ್ಮಾಣ ಇದರ ಮೂಲ ಆಶಯ. ಅಜ್ಞಾನ, ಅಂಧಕಾರ, ಅಂಧಶ್ರದ್ಧೆ ಇವೆಲ್ಲವುಗಳನ್ನು ಅಳಿಸಿ ವೈಜ್ಞಾನಿಕ ಚಿಂತನೆಯನ್ನು ಮೂಡಿಸಿ, ಸುಜ್ಞಾನವನ್ನು ಬೆಳೆಸುವುದೇ ಇದರ ತಿರುಳು. ಸದೃಢ ನಾಡನ್ನು ಕಟ್ಟಲು ಸದೃಢ ಯುವ ಜನಾಂಗ ಅವಶ್ಯ. ಹಾಗಾಗಿ ಸದೃಢ ಸಮಾಜಕ್ಕಾಗಿ ಯುವ ಜನಾಂಗವನ್ನು ಸಕಾರಾತ್ಮಕ ಚಿಂತನೆಯ ಕಡೆಗೆ ಪ್ರೇರೇಪಿಸಬೇಕಿದೆ. ಆಧುನಿಕ ಅವಸರದ ಬದುಕಿನಲ್ಲಿ ಕೆಲವೊಮ್ಮೆ ನಮ್ಮತನವನ್ನೇ ಮರೆಯುವ ಸ್ಥಿತಿಯನ್ನು ತಲುಪಿದ್ದೇವೆ. ಇದಕ್ಕೆ ಪರಿಹಾರವಾಗಿ ಮಕ್ಕಳಲ್ಲಿ ಆಧ್ಯಾತ್ಮದ ಅರಿವನ್ನು ಮೂಡಿಸುವ ಆಶಯ ಈ ಅಭಿಯಾನಕ್ಕಿದೆ.

ಲಿಂಗ ಭೇದವನ್ನು ತೊ-ರೆದು ಮಹಿಳೆಯರ ಘನತೆಯನ್ನು ಗೌರವವನ್ನು ಕಾಪಾಡುವ ಸದುದ್ದೇಶ ಈ ಬಸವ ಸಂಸ್ಕೃತಿ ಅಭಿಯಾನಕ್ಕಿದೆ. ಸರ್ವ ಜನಾಂಗದ ವ್ಯಕ್ತಿತ್ವ ವಿಕಾಸಗೊಂಡಾಗ ಮಾತ್ರ ಸಮಸ್ತ ಕುಲ ಕೋಟಿಯ ಅಭಿವೃದ್ಧಿ ಸಾಧ್ಯ ಎನ್ನುವ ಆಶಯಗಳೊಂದಿಗೆ ಈ ಬಸವ ಸಂಸ್ಕೃತಿ ಅಭಿಯಾನವು ನಾಡಿನಾದ್ಯಂತ ಸಕಾರಾತ್ಮಕ ಸಂಚಲನವನ್ನು ಮೂಡಿಸಿದೆ.

ಗದಗ ಜಿಲ್ಲೆಗೆ ಈ ಬಸವ ಸಂಸ್ಕೃತಿ ಅಭಿಯಾನದ ರಥಯಾತ್ರೆ ಸೆ. 9ರಂದು ಮುಂಜಾನೆ 9 ಗಂಟೆಗೆ ಜಗದ್ಗುರು ತೋಂಟದಾರ್ಯ ಇಂಜಿನಿಯರಿಂಗ್ ಮಹಾವಿದ್ಯಾಲಯದ ಮುಂಭಾಗದಿಂದ ಆಗಮಿಸಲಿದ್ದು, ಅಲ್ಲಿಂದ ಬಸವರಥಯಾತ್ರೆಯ ಸ್ವಾಗತ ನಡೆಯಲಿದೆ. ನಂತರ ಗದುಗಿನ ತೆ-ೂಂಟದಾರ್ಯ ಮಠದ ಆವರಣದಲ್ಲಿ ಷಟಸ್ಥಲ ಧ್ವಜಾರೋಹಣ ಕಾರ್ಯಕ್ರಮ ಪರಮ ಪೂಜ್ಯರ ಶರಣ ಬಂಧುಗಳ ಸಮ್ಮುಖದಲ್ಲಿ ನೆರವೇರಲಿದೆ. ನಂತರ ಬೆಳಿಗ್ಗೆ 11 ಗಂಟೆಗೆ ಶ್ರೀ ಸಿದ್ದಲಿಂಗೇಶ್ವರ ಶಿವಾನುಭವ ಮಂಟಪದಲ್ಲಿ ಕಾಲೇಜು ವಿದ್ಯಾರ್ಥಿಗಳೊಂದಿಗೆ ಪ್ರಮುಖ ವಿಷಯಗಳನ್ನು ಒಳಗೊಂಡ ಪ್ರಶ್ನೋತ್ತರ ಸಂವಾದ ಕಾರ್ಯಕ್ರಮ ನೆರವೇರಲಿದೆ. ಈ ಸಂವಾದದ ನಂತರ ಶ್ರೀಮಠದಲ್ಲಿ ಪ್ರಸಾದದ ವ್ಯವಸ್ಥೆ, ನಂತರ 4.30 ಗಂಟೆಗೆ ನಾಮ ಜೋಶಿ ರಸ್ತೆಯಲ್ಲಿರುವ ಬಸವೇಶ್ವರ ಮೂರ್ತಿಗೆ ಮಾಲಾರ್ಪಣೆ ಹಾಗೂ ಬಸವೇಶ್ವರ ಸರ್ಕಲ್‌ನಿಂದ ಜಗದ್ಗುರು ತೋಂಟದಾರ್ಯ ಮಠದವರೆಗೆ ವಚನ ಕಟ್ಟುಗಳನ್ನು ತಲೆಯ ಮೇಲೆ ಹೊರುವ ಮೂಲಕ ವಚನಗಳ ಪಠಣ ದೊಂದಿಗೆ ರಥಯಾತ್ರೆ ಸಾಗಲಿದೆ.

ಈ ರಥಯಾತ್ರೆಯಲ್ಲಿ ಎಲ್ಲಾ ಬಸವಪರ ಸಂಘಟನೆಗಳು, ಶರಣ ಸಾಹಿತ್ಯ ಪರಿಷತ್ತು ಕದಳಿ ಮಹಿಳಾ ವೇದಿಕೆ ಜಾಗತಿಕ ಲಿಂಗಾಯತ ಮಹಾಸಭಾ ಹೀಗೆ ಎಲ್ಲ ಸಮುದಾಯದ ಶರಣ ಬಂಧುಗಳು ಒಟ್ಟಾಗಿ ಸಾಗಲಿದ್ದಾರೆ. ನಂತರ ಸಾಯಂಕಾಲ 6 ಗಂಟೆಗೆ ತೋಂಟದಾರ್ಯ ಮಠದ ಆವರಣದಲ್ಲಿರುವ ಪೂಜ್ಯ ಸಿದ್ದಲಿಂಗೇಶ್ವರ ಶಿವಾನುಭವ ಮಂಟಪದಲ್ಲಿ ಸಭಾ ಕಾರ್ಯಕ್ರಮ ನೆರವೇರಲಿದೆ. ಈ ಸಭಾ ಕಾರ್ಯಕ್ರಮದಲ್ಲಿ ಪೂಜ್ಯಶ್ರೀ ಡಾ. ತೆ-ೂಂಟದ ಸಿದ್ದರಾಮ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ನಾಡಿನಾದ್ಯಂತ ಆಗಮಿಸಲಿರುವ ಎಲ್ಲ ಪರಮಪೂಜ್ಯರ ಸಾನ್ನಿಧ್ಯದಲ್ಲಿ ವಿಶ್ರಾಂತ ಪ್ರಾಚಾರ್ಯರು, ಸಾಹಿತಿಗಳಾದ ಪ್ರೊ. ಚಂದ್ರಶೇಖರ್ ವಸ್ತ್ರದರ ಅಧ್ಯಕ್ಷತೆಯಲ್ಲಿ 'ಶಿವ ಚಿಂತೆ-ಶಿವ ಜ್ಞಾನವಿಲ್ಲದ ಮನುಜರು' ಎನ್ನುವ ವಿಷಯದ ಮೇಲೆ ವಿಶೇಷ ಉಪನ್ಯಾಸ ಹಾಗೂ 'ಅಸ್ಪೃಶ್ಯತೆ ನಿವಾರಣೆಗೆ ಶರಣರ ಕೊಡುಗೆ' ಎನ್ನುವ ವಿಷಯಗಳ ವಿಶೇಷ ಉಪನ್ಯಾಸ ನೆರವೇರಲಿದೆ.

ಇದೇ ಸಭಾ ಕಾರ್ಯಕ್ರಮದಲ್ಲಿ ಲೇಖಕರು, ಶರಣ ಚಿಂತಕರಾದ ಬಸವರಾಜ್ ವೆಂಕಟಾಪುರ ರಚಿಸಿದ 'ವಚನ ಶಾಸ್ತ್ರ ಸಾರ ಭಾಗ ಒಂದು', 'ಭಕ್ತಸ್ಥಲ-ಭಾಗ 2ರ ವಚನ ವಿಶ್ಲೇಷಣೆ' ಎನ್ನುವ ಎರಡು ವಿಶೇಷ ಗ್ರಂಥಗಳು ಲೋಕಾರ್ಪಣೆಗೊಳ್ಳಲಿವೆ. ಈ ಎಲ್ಲ ಕಾರ್ಯಕ್ರಮಗಳ ಸ್ವಾಗತ ಸಮಿತಿಯ ಅಧ್ಯಕ್ಷ, ಸಂತ ರಾಜಕಾರಣಿ ಡಿ.ಆರ್. ಪಾಟೀಲರು ಎಲ್ಲ ಶರಣ ಬಂಧುಗಳಿಗೆ ಸ್ವಾಗತ ಕೋರಲಿದ್ದಾರೆ. ಪ್ರಾಸ್ತಾವಿಕ ನುಡಿಗಳನ್ನು ಜಾಗತಿಕ ಲಿಂಗಾಯತ ಮಹಾಸಭಾದ ಅಧ್ಯಕ್ಷರಾದ ಕೆ.ಎಸ್. ಚೆಟ್ಟಿ, ಶರಣು ಸಮರ್ಪಣೆಯನ್ನ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ ನಿರ್ವಹಿಸಲಿದ್ದಾರೆ. ಸಭಾ ಕಾರ್ಯಕ್ರಮದ ನಂತರ ರಾತ್ರಿ 8 ಗಂಟೆಗೆ 'ಜಂಗಮದೆಡೆಗೆ' ಎನ್ನುವ ವಿಶೇಷ ನಾಟಕ ಪ್ರದರ್ಶನಗೊಳ್ಳಲಿದೆ.

ಹೀಗೆ ಒಂದು ದಿನದ ಈ ಬಸವ ಸಂಸ್ಕೃತಿ ಅಭಿಯಾನದ ರಥಯಾತ್ರೆ ಎಲ್ಲರ ಮನದಲ್ಲಿ ಶರಣ ಸಂಸ್ಕೃತಿಯನ್ನ ಮತ್ತೊಮ್ಮೆ ಬಿತ್ತರಿಸಲಿವೆ. ಶರಣರ ಅರ್ಥಪೂರ್ಣ ವಿಚಾರಗಳು ನಮ್ಮೆಲ್ಲರ ಬದುಕಿಗೆ ದಾರಿದೀಪ. ಎಲ್ಲರೂ ಒಟ್ಟಾಗಿ ಈ ಬಸವ ಸಂಸ್ಕೃತಿ ಅಭಿಯಾನವನ್ನು ಗದಗ ಜಿಲ್ಲೆಯಲ್ಲಿ ಯಶಸ್ವಿಗೊಳಿಸೋಣ.



– ಪ್ರೊ. ಸುಧಾ ಹುಚ್ಚಣ್ಣವರ.
ಜಿಲ್ಲಾಧ್ಯಕ್ಷರು,
ಕದಳಿ ಮಹಿಳಾ ವೇದಿಕೆ ಗದಗ.

## ಉಚಿತ ನೇತ್ರ ತಪಾಸಣೆ ಸೆ.19ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿವಮೊಗ್ಗದ ಶಂಕರ ಕಣ್ಣಿನ ಆಸ್ಪತ್ರೆ, ಲಕ್ಷ್ಮೇಶ್ವರ ತಾಲೂಕು ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ತಾಲೂಕಾ ವೈದ್ಯರ ಸಂಘ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ, ಶಿರಹಟ್ಟಿ ತಾಲೂಕಾ ಔಷಧ ವ್ಯಾಪಾರಸ್ಥರ ಸಂಘ, ವಿಶ್ವ ಕಂಪ್ಯೂಟರ್ ಅಕಾಡೆಮಿ ಇವುಗಳ ಸಂಯುಕ್ತಾಶ್ರಯದಲ್ಲಿ ಸೆ.19ರಂದು ಬೆಳಿಗ್ಗೆ 9ರಿಂದ 11 ಗಂಟೆಯವರೆಗೆ ಲಕ್ಷ್ಮೇಶ್ವರದ ಜ್ಯೋತಿ ನರ್ಸಿಂಗ್ ಹೋಮ್‌ನಲ್ಲಿ ಉಚಿತ ನೇತ್ರ ತಪಾಸಣೆ ಮತ್ತು ಶಸ್ತ್ರಚಿಕಿತ್ಸಾ ಶಿಬಿರ ನಡೆಯಲಿದ್ದು, ಕಣ್ಣಿನ ಇತರೆ ತೊಂದರೆಗಳಿಗೆ ಚಿಕಿತ್ಸೆ ನೀಡಲಾಗುವುದು ಎಂದು ಸಂಘಟಕ ಬಸವರಾಜ ಸಂಗಪ್ಪಶೆಟ್ಟರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ರಿ.ಸ.ನಂ. 680/2ಬ/1 ಟಿ.ಎಂ.ಸಿ ನಂ.3329/ಎ/1 ಆಸ್ತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ರೋಣ ಇವರಿಗೆ ವಸತಿ ನಿಲಯ ಕಟ್ಟಡಕ್ಕಾಗಿ ಮಂಜೂರು ಮಾಡಲು ತೀರ್ಮಾನಿಸಲಾಗಿದೆ. ಈ ಕುರಿತು ಯಾವುದೇ ತಕರಾರು ಆಕ್ಷೇಪಣೆ ಇದ್ದಲ್ಲಿ 30 (ಮೂವತ್ತು) ದಿವಸಗಳಲ್ಲಿ ಲಿಖಿತ ರೂಪದಲ್ಲಿ ಸಲ್ಲಿಸಬೇಕು. ತಪ್ಪಿದಲ್ಲಿ ಯಾವುದೇ ಆಕ್ಷೇಪಣೆಗಳು ಇರುವುದಿಲ್ಲ ಎಂದು ತಿಳಿದು ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ರಿ.ಸ.ನಂ. 493/1+493/2+494/1 ಪುರಸಭೆ ಮಾಲ್ಕಿ ಆಸ್ತಿಯನ್ನು ರೋಣ ತಾಲೂಕ ನೇಕಾರ ಕುರುವಿನಶೆಟ್ಟಿ ಸಂಘ( ರಿ) ರೋಣ ಇವರಿಗೆ ಸಮುದಾಯ ಭವನದ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಲು ತೀರ್ಮಾನ ಮಾಡಲಾಗಿದೆ. ಈ ಕುರಿತು ಯಾವುದೇ ತಕರಾರು ಆಕ್ಷೇಪಣೆ ಇದ್ದಲ್ಲಿ 30 (ಮೂವತ್ತು) ದಿವಸಗಳಲ್ಲಿ ಲಿಖಿತ ರೂಪದಲ್ಲಿ ಸಲ್ಲಿಸಬೇಕು ತಪ್ಪಿದಲ್ಲಿ ಯಾವುದೇ ಆಕ್ಷೇಪಣೆಗಳು ಇರುವುದಿಲ್ಲ ಎಂದು ತಿಳಿದು ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಮಕ್ಕಳ ಕಲೆಯನ್ನು ಪ್ರೋತ್ಸಾಹಿಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿ ಅಡಗಿರುವ ಕಲೆಯನ್ನು ಪ್ರೋತ್ಸಾಹಿ ಬೆನ್ನು ತಟ್ಟಬೇಕು ಎಂದು ಮುಳಗುಂದ ಬಿ.ಎಂ.ಎಸ್ ಆಂಗ್ಲ ಮಾಧ್ಯಮ ಶಾಲೆಯ ಪ್ರಧಾನ ಗುರುಮಾತೆ ಫಾತೀಮಾ ಖವಾಸ ಹೇಳಿದರು.

ಅವರು ಗದಗ ಜಿಲ್ಲೆಯ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ಹಾಗೂ ತಾಲೂಕು ಬಾಲಭವನ ಸಮಿತಿ ವತಿಯಿಂದ ಜರುಗಿದ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಕ್ಕಳನ್ನು ಗೌರವಿಸಿ ಮಾತನಾಡಿದರು.

ಮಕ್ಕಳಲ್ಲಿ ಸಂಗೀತ, ಸಾಹಿತ್ಯ, ಭರತನಾಟ್ಯದಂತ ಹಲವಾರು ಕಲೆಗಳು ಅಡಕವಾಗಿರುತ್ತವೆ. ಅವುಗಳನ್ನು ಪಾಲಕರು ಹಾಗೂ ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಿದಲ್ಲಿ ಉತ್ತಮ ಪ್ರತಿಭೆಗಳಾಗಿ ಹೊರ ಹೊಮ್ಮಲು ಸಹಕಾರಿಯಾಗುತ್ತದೆ ಎಂದರು. ಭರತನಾಟ್ಯದಲ್ಲಿ ಯಶಸ್ವಿನಿ ಲಮಾಣಿ, ಖುಷಿ ಸಿರೂರ, ರೂಪಾ ಬ್ಯಾಳಿ, ಶಿವಪ್ರಿಯಾ ಸೋನಗೋಜಿ, ಸನ್ನಿದಿ ಸೋನಗೋಜಿ ಬಹುಮಾನ ಪಡೆದರೆ, ಸಂಗೀತ ಸ್ಪರ್ಧೆಯಲ್ಲಿ ಸನ್ನಿಧಿ ಸೋನಗೋಜಿ ತೃತೀಯ ಸ್ಥಾನ ಪಡೆದಿದ್ದಾಳೆ.

## ಬೆಳೆ ಹಾನಿ ಪರಿಹಾರ ನೀಡುವಂತೆ ಮನವಿ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ನಿರಂತರವಾಗಿ ಮಳೆಯಾಗಿದ್ದರಿಂದ ರೈತರಿಗೆ ನಷ್ಟವಾಗಿದ್ದು, ಪರಿಹಾರ ನೀಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಗದಗ ಜಿಲ್ಲಾಧ್ಯಕ್ಷ ಮುತ್ತನಗೌಡ ಭ.ಚೌಡರಡ್ಡಿ ನೇತೃತ್ವದಲ್ಲಿ ರೈತರು ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ರೈತ ಮುಖಂಡ ಮುತ್ತನಗೌಡ ಚೌಡರೆಡ್ಡಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಎಲ್ಲ ತಾಲೂಕಗಳ ರೈತರು ಸಾಲ ಮಾಡಿ ಬಿತ್ತನೆ ಬೀಜ, ಗೊಬ್ಬರಕ್ಕಾಗಿ ಖರ್ಚು ಮಾಡಿದ್ದು, ಅತಿವೃಷ್ಟಿಯಿಂದ ಬೆಳೆಗಳು ಸಂಪೂರ್ಣ ನಾಶವಾಗಿವೆ. ಇದರಿಂದ ರೈತರು ಅಪಾರ ನಷ್ಟವನ್ನು ಅನುಭವಿಸುತ್ತಿದ್ದಾರೆ. ರೈತರು ಬಹಳ ಸಂಕಷ್ಟದಲ್ಲಿದ್ದು, ಶೀಘ್ರವಾಗಿ ರೈತರಿಗೆ ಬೆಳೆ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಗಣ್ಣ ದಂಡಿನ, ಅಶೋಕ ಹಿರೇಮಠ, ಎಸ್.ಎಮ್. ಪರಡ್ಡಿ, ಸಂಗಣ್ಣ ಪವಾಡಶೆಟ್ಟಿ, ಮೇಘರಾಜ ಭಾವಿ, ಧರ್ಮಣ್ಣ ಬೂಸಗೌಡರ, ಬಸವರಾಜ ಹೊಸಮನಿ, ಚಂದ್ರಶೇಖರಯ್ಯ ವಸ್ತ್ರದ, ಸಂಪತಕುಮಾರ ಅಮರನಾಥ, ಮಹೇಶ ಹಿರೇಮಠ, ಎಂ.ಎಸ್. ಹಡಪದ ಮುಂತಾದವರು ಉಪಸ್ಥಿತರಿದ್ದರು.

## ನಾಳೆ ಜಿಲ್ಲಾ ಮಟ್ಟದ ಮ್ಯಾರಾಥಾನ್ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಏಡ್ಸ್ ಪ್ರೀವೇನ್‌ಷನ್ ಸೊಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಐ.ಎಮ್.ಎ, ರೋಟರಿ ಸೆಂಟ್ರಲ್ ಗದಗ, ಲಯನ್ಸ್ ಕ್ಲಬ್ ಗದಗ-ಬೆಟಗೇರಿ, ನೂರಾನಿ ಟ್ರಸ್ಟ್ ಗದಗ-ಬೆಟಗೇರಿ, ಶಿಕ್ಷಣ ಇಲಾಖೆ, ಕ್ರೀಡಾ ಇಲಾಖೆ, ರಕ್ಷಣೆ ಸಂಸ್ಥೆ, ಸೃಷ್ಟಿ ಸಂಕುಲ ಸಂಸ್ಥೆ, ಚೈತನ್ಯ ಸಂಸ್ಥೆ, ನವಚೇತನ ಸಂಸ್ಥೆ, ಗದಗ ಜಿಲ್ಲೆಯ ಎನ್.ಎಸ್.ಎಸ್. ಘಟಕಗಳು ಹಾಗೂ ರೆಡ್ ರಿಬ್ಬನ್ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ಹೆಚ್.ಐ.ವಿ/ಏಡ್ಸ್ ತಡೆಗಟ್ಟಲು ತೀವ್ರತರವಾದ ಐ.ಇ.ಸಿ ಪ್ರಚಾರಾಂದೋಲನ-2025ರ ಅಂಗವಾಗಿ ರೆಡ್ ರಿಬ್ಬನ್ ರನ್ ಕಾಲೇಜು ವಿದ್ಯಾರ್ಥಿಗಳಿಗಾಗಿ 5 ಕಿ.ಮೀ. ಮ್ಯಾರಾಥಾನ ಸ್ಪರ್ಧೆಯನ್ನು ದಿ. 10-09-2025ರಂದು ಏರ್ಪಡಿಸಲಾಗಿದೆ.

ಸದರಿ ಸ್ಪರ್ಧೆಗೆ ಎನ್.ಎಸ್.ಎಸ್. ರೆಡ್ ರಿಬ್ಬನ್ ಕಾಲೇಜಿನಿಂದ 5 ಜನ ವಿದ್ಯಾರ್ಥಿಗಳು ಮತ್ತು 5 ಜನ ವಿದ್ಯಾರ್ಥಿನಿಯರನ್ನು ಸ್ಪರ್ಧೆಗೆ ನಿಯೋಜನೆ ಮಾಡಲು ಕೋರಲಾಗಿದೆ.

ಸ್ಪರ್ಧಾ ವಿಜೇತರಿಗೆ ಪ್ರಥಮ ಬಹುಮಾನ 5000=00 ರೂ, ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು 5000=00ರೂ, ವಿದ್ಯಾರ್ಥಿನಿಯರಿಗೆ, ದ್ವಿತೀಯ ಬಹುಮಾನವಾಗಿ ಕಾಲೇಜು ಹುಡುಗರಿಗೆ 3500=00ರೂ, ಹುಡುಗಿಯರಿಗೆ 3500=00ರೂ, ಹಾಗೂ ತೃತೀಯ ಬಹುಮಾನವಾಗಿ ಹುಡುಗರಿಗೆ 2500=00ರೂ, ಹಾಗೂ ಹುಡುಗಿಯರಿಗೆ 2500=00ರೂ, ಮತ್ತು ಪ್ರಮಾಣ ಪತ್ರಗಳನ್ನು ವಿತರಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತುಕುಟುಂಬ ಕಲ್ಯಾಣ ಅಧಿಕಾರಿಗಳು ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಎಸ್‌ಟಿ ಸರಳೀಕರಣ ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೇಂದ್ರ ಸರಕಾರ ಜಿಎಸ್‌ಟಿ ತೆರಿಗೆ ಸರಳೀಕರಣಗೊಳಿಸಿರುವುದನ್ನು ಹಿರೇಅಳಗುಂಡಿಯ ಚನ್ನು ಪಾಟೀಲ ಫೌಂಡೇಷನ್‌ನ ಸಂಸ್ಥಾಪಕ ಉಮೇಶ ಪಾಟೀಲ ಹೃತ್ಪೂರ್ವಕವಾಗಿ ಸ್ವಾಗತಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜನಸಾಮಾನ್ಯರ ಬದುಕಿನ ಬವಣೆಗಳನ್ನು ಕಂಡ ನೆಚ್ಚಿನ ಪ್ರಧಾನಿ ಈ ತೆರಿಗೆ ಸರಳಿಕರಣಕ್ಕೆ ಸೂಚಿಸಿದ್ದು, ಇದು ಭಾರತೀಯರ ಪಾಲಿಗೆ ದೀಪಾವಳಿಯ ದೊಡ್ಡ ಕಾಣಿಕೆಯಾಗಿದೆ. ತೆರಿಗೆ ಸರಳೀಕರಣದ ಲಾಭವು ಜನತೆಗೆ ಈ ಸಾರೆಯ ದಸರೆಗೆ ಕೇಂದ್ರ ಸರಕಾರ ನೀಡಿದ ದೊಡ್ಡ ಕೊಡುಗೆಯಾಗಿದೆ ಎಂದು ತಿಳಿಸಿದ್ದಾರೆ. ಪ್ರಧಾನಿ ಮೋದಿಯವರ ಈ ಕ್ರಮವನ್ನು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಮುಖಂಡರು ಸ್ವಾಗತಿಸಿರುವುದು ಉತ್ತಮ ಬೆಳವಣಿಗೆ.



ಮೋದಿಯವರ ಇಂತಹ ಅನೇಕ ಕ್ರಾಂತಿಕಾರಕ ನಿರ್ಧಾರಗಳಿಂದಲೇ ದೇಶವಿಂದು ಆರ್ಥಿಕತೆಯಲ್ಲಿ ಜಗತ್ತಿನ ದೊಡ್ಡಣ್ಣ ಅಮೆರಿಕಕ್ಕೂ ಸೆಡ್ಡು ಹೊಡೆಯುವಂತೆ ಬೆಳೆದು ನಿಂತಿರುವುದು ಭಾರತೀಯರೆಲ್ಲರೂ ಹೆಮ್ಮೆ ಮತ್ತು ಅಭಿಮಾನ ಪಡಬೇಕಾದ ವಿಷಯವಾಗಿದೆ ಎಂದು ಉಮೇಶ ಪಾಟೀಲ ತಿಳಿಸಿದ್ದಾರೆ.

## ಟಿ.ಬಿ ಮಾನ್ವಿ ಕಾಲೇಜು 'ಸಮಗ್ರ ವೀರಾಗ್ರಣಿ'



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಕ್ರೀಡಾಂಗಣದಲ್ಲಿ 2025-26ನೇ ಸಾಲಿನ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ನಡೆದ ಲಕ್ಷ್ಮೇಶ್ವರ ತಾಲೂಕ ಮಟ್ಟದ ಕ್ರೀಡಾಕೂಟದಲ್ಲಿ ಪಟ್ಟಣದ ಟಿ.ಬಿ ಮಾನ್ವಿ ಸರಕಾರಿ ಪಿ.ಯು ಕಾಲೇಜಿನ ವಿದ್ಯಾರ್ಥಿಗಳು ವೈಯಕ್ತಿಕ ಹಾಗೂ ಗುಂಪು ಕ್ರೀಡೆಗಳಲ್ಲಿ ಸಮಗ್ರ ವೀರಾಗ್ರಣಿ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ.

ಗುಂಪು ಆಟ-ಬಾಲಕರ ವಿಭಾಗದಲ್ಲಿ ಥ್ರೋಬಾಲ್-ಪ್ರಥಮ, ಕಬಡ್ಡಿ-ದ್ವಿತೀಯ, ಬಾಲಕಿಯರ ವಿಭಾಗದಲ್ಲಿ ಖೋಖೋ-ಪ್ರಥಮ, ಕಬಡ್ಡಿ- ಪ್ರಥಮ, ಥ್ರೋಬಾಲ್ ದ್ವಿತೀಯ, ವೈಯಕ್ತಿಕ ಆಟಗಳು- ಬಾಲಕಿಯರ ವಿಭಾಗ: 100ಮೀ ಓಟ-ಪ್ರಥಮ, 200ಮೀ ಓಟ ಪ್ರಥಮ, 400ಮೀ ಓಟ ದ್ವಿತೀಯ, 800ಮೀ ಮತ್ತು 3000ಮೀ ಪ್ರಥಮ, 4/100 ರಿಲೇ ಪ್ರಥಮ, ಗುಂಡು ಎಸೆತ ಪ್ರಥಮ, ಬಾಲಕರ ವಿಭಾಗ- ಎತ್ತರ ಜಿಗಿತ ಪ್ರಥಮ, 5000 ಮೀ ಓಟ ಪ್ರಥಮ, ಜಾವಲಿನ್ ಎಸೆತ ಪ್ರಥಮ ಸ್ಥಾನ ಪಡೆದು ಮಹಾವಿದ್ಯಾಲಯಕ್ಕೆ ವೀರಾಗ್ರಣಿ ಪ್ರಶಸ್ತಿ ತಂದುಕೊಟ್ಟರು.

ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಡಾ. ಚಂದ್ರು ಲಮಾಣಿ ವಿದ್ಯಾರ್ಥಿಗಳ ಸಾಧನೆಯನ್ನು ಪ್ರಶಂಶಿಸಿದರು. ಉಪಾಧ್ಯಕ್ಷ ಸುನಿಲ ಮಹಾಂತಶೆಟ್ಟರ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಿದರು.

ಈ ವೇಳೆ ಸಿಬಿಸಿ ಸದಸ್ಯರಾದ ತೋಂಟೇಶ ಮಾನ್ವಿ, ಶಕ್ತಿ ಕತ್ತಿ, ಗಂಗಾಧರ ಮೆಣಸಿನಕಾಯಿ, ಅನಿಲ ಮುಳಗುಂದ, ಬಸವರಾಜ ಕಲ್ಲೂರ, ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ, ಕ್ರೀಡಾ ಕಾರ್ಯದರ್ಶಿ ಡಾ. ಶಂಕರ್ ಈಟಿ, ಉಪನ್ಯಾಸಕರು, ಸಿಬ್ಬಂದಿ ವರ್ಗದವರಿದ್ದರು.

## ಹಿರಿಯ ನಾಗರಿಕರಿಗೆ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆಗಳು

■ವಿಜಯಸಾಕ್ಷಿ ಸುದ್ದಿ, ಗದಗ

ದಿ.14/12/1990ರಲ್ಲಿ ಸಂಯುಕ್ತ ರಾಷ್ಟ್ರಗಳು ((United Nations) ಸಾಮಾನ್ಯ ಸಭೆಯಲ್ಲಿ ಅಕ್ಟೋಬರ್ 01ನೇ ತಾರೀಖನ್ನು ಅಂತಾರಾಷ್ಟ್ರೀಯ ಹಿರಿಯ ನಾಗರಿಕರ ದಿನಾಚರಣೆಯನ್ನಾಗಿ ಆಚರಿಸಲು ತಿರ್ಮಾನ ತೆಗೆದುಕೊಳ್ಳಲಾಗಿದೆ. ಅದರಂತೆ, ವಿಶ್ವಾದ್ಯಂತ ಅಕ್ಟೋಬರ್ 01 ನ್ನು ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ.

ಈ ವರ್ಷವು ಸಹ ದಿನಾಂಕ:01/10/2025 ರಂದು ಜಿಲ್ಲಾ ಮಟ್ಟದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ಆಚರಿಸಲು ಉದ್ದೇಶಿಸಲಾಗಿದೆ. ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2025ರ ನಿಮಿತ್ತ ಹಿರಿಯ ನಾಗರಿಕರು ತಮ್ಮಲ್ಲಿರುವ ಕ್ರೀಡಾ ಮನೋಭಾವ ಮತ್ತು ಸಾಂಸ್ಕೃತಿಕ ಕಲೆಯನ್ನು ತೋರ್ಪಡಿಸಲು ಅನುಕೂಲವಾಗುವಂತೆ, ಜಿಲ್ಲಾ ಮಟ್ಟದಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಆದ್ದರಿಂದ, ಗದಗ ಜಿಲ್ಲೆಯ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ದಿ.19/09/2025 ರಂದು ಬೆಳಿಗ್ಗೆ: 09:00 ಗಂಟೆಗೆ ಕೆ.ಹೆಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಸ್ಪರ್ಧೆಗಳಲ್ಲಿ ಭಾಗವಹಿಸಲಿಚ್ಚಿಸುವ ಹಿರಿಯ ನಾಗರಿಕರು ತಮ್ಮ ಹಿರಿಯ ನಾಗರಿಕರ ಗುರುತಿನ ಚೀಟಿ ಅಥವಾ ವಯಸ್ಸಿನ ಆಧಾರ್ ಕಾರ್ಡ್ ಹಾಗೂ ಒಂದು ಫೋಟೊ ದಾಖಲಾತಿಗಳೊಂದಿಗೆ ಶ್ರೀ ಸಿದ್ಧೇಶ್ವರ ವಿದ್ಯಾಪೀಠ (ರಿ) ಗದಗ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಎಸ್.ಪಿ. ಕಚೇರಿ, ಗದಗ ವೀಣಾ-8095653494 ಜಿ.ಎಫ್. ಉಪನಾಳ ಟ್ರಸ್ಟ್(ರಿ), ಶಾಂತಿದಾಮ ವೃದ್ಧಾಶ್ರಮ, ಲಕ್ಷ್ಮೇಶ್ವರ, ಅಶ್ವಿನಿ-7349590149 ವನಜ್ಯೋತಿ ಸೇವಾ ಸಂಸ್ಥೆ(ರಿ), ಜೀವನಜ್ಯೋತಿ ವೃದ್ಧಾಶ್ರಮ, ಬೆಟಗೇರಿ. ಮಂಜುಳಾ-7026793946 ಸುರಭಿ ವೃದ್ಧಾಶ್ರಮ, ಹುಲಕೋಟಿ, ರಾಜೇಸಾಬ-7259339092 ಜೀವನಜ್ಯೋತಿ ಸೇವಾ ಸಂಸ್ಥೆ (ರಿ), ಜೀವನಜ್ಯೋತಿ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ, ಬೆಟಗೇರಿ ಯಶೋಧಾ-9164238468 ಎಮ್.ಆರ್.ಡಬ್ಲ್ಯೂ ತಾ.ಪಂ. ಗದಗ-8867556465, ಎಮ್.ಆರ್.ಡಬ್ಲ್ಯೂ ಮುಂಡರಗಿ ತಾ.ಪಂ-9611922445, ಎಮ್.ಆರ್.ಡಬ್ಲ್ಯೂ ಶಿರಹಟ್ಟಿ-8951128679 ಎಮ್.ಆರ್.ಡಬ್ಲ್ಯೂ ತಾ.ಪಂ. ರೋಣ-9741615926 ಎಮ್.ಆರ್.ಡಬ್ಲ್ಯೂ ತಾ.ಪಂ ನರಗುಂದ-9591679022

ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ, ಗದಗ ವರದಾ ಕೋಲಕಾರ್-7795100806 ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ-ಸಂಸ್ಥೆಗಳು ಇವರಲ್ಲಿ ದಾಖಲೆಗಳ ಝುರಾಕ್ಸ್ ಪ್ರತಿಗಳೊಂದಿಗೆ ಹೆಸರನ್ನು ದಿನಾಂಕ:17/09/2025 ಸಾಯಂಕಾಲ 05:00 ಗಂಟೆಗಳೊಳಗಾಗಿ ನೋಂದಾಯಿಸಲು ಹಾಗೂ ನೇರವಾಗಿ ಸ್ಪರ್ಧೆಗಳು ನಡೆಯುವ ದಿನಾಂಕದಂದು ನೋಂದಾಯಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ:08372-220419, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ:29 ಜಿಲ್ಲಾ ಆಡಳಿತ ಭವನ, ಗದಗ ಇಲ್ಲಿಗೆ ಸಂಪರ್ಕಿಸಬಹುದು. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಸೆ.11,12ರಂದು ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

▸▸ ಮೊದಲನೇ ಪುಟದಿಂದ

ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ಗದಗ -ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್‌ಸಿಂಗ್, ಯೋಜನೆ ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಚೇತನ್ ಆರ್ ಆಗಮಿಸುವರು. ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

### ಗದಗ ಜಿಲ್ಲಾಡಳಿತದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ

# ನಾರಾಯಣ ಗುರುಗಳ ಸಮಾಜ ಸೇವೆ ಅನನ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಜಾತಿ, ಮತ ಭೇದಗಳು ಹೆಚ್ಚಾಗಿದ್ದ ಕಾಲದಲ್ಲಿ ಬ್ರಹ್ಮಶ್ರೀ ನಾರಾಯಣ ಗುರುವೆಂಬ ಸಮಾಜಕ ಸುಧಾರಕ ಉದಯಿಸಿ, ಸಮಾಜದ ತಾರತಮ್ಯಗಳನ್ನು ಕಡಿಮೆ ಮಾಡಲು ತಮ್ಮ ಇಡೀ ಜೀವನವನ್ನು ಮುಡಿಪಾಗಿಟ್ಟು ಹೋರಾಡಿದರು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ರವಿವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಹಯೋಗದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂಸ್ಕೃತ ಭಾಷೆಯಲ್ಲಿ ಅದ್ವಿತೀಯ ಪಂಡಿತರಾಗಿದ್ದ ನಾರಾಯಣ ಗುರುಗಳು, ಕೇರಳ



ಸಮಾಜದಲ್ಲಿ ಅಸ್ಪೃಶ್ಯತೆಯ ಪಿಡುಗಿಗೆ ತಮ್ಮದೇ ಆದ ನಿಲುವಿನಲ್ಲಿ, ಸಮಾಧಾನಕರವಾದ ಉಪಾಯಗಳನ್ನು ಕಂಡುಕೊಂಡರು. ದೇಶ ಸೇವೆಯೇ ಈಶ ಸೇವೆಯೆಂದು ಅವರು ಬೋಧಿಸಿದ್ದಾರೆ ಎಂದು ಡಾ. ದುರಗೇಶ್ ಕೆ.ಆರ್ ವಿವರಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ ಜಯಂತಿಗೆ ಚಾಲನೆ ನೀಡಿ ಮಾತನಾಡಿ, ಆರ್ಯ ಈಡಿಗ ಸಮುದಾಯದವರು ಮೊದಲು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಮುಂದಾಗಬೇಕು. ಆ ಮೂಲಕ ಸಮುದಾಯ ಸಾಮಾಜಿಕವಾಗಿ, ಆರ್ಥಿಕವಾಗಿ ಮುಂದೆ ಬರಬೇಕು ಎಂದರು. ಗದುಗಿನ ಪರಶುರಾಮ ಈಳಗೇರ ಉಪನ್ಯಾಸ ನೀಡುತ್ತಾ, ಬ್ರಹ್ಮಶ್ರೀ ನಾರಾಯಣ ಗುರುಗಳು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ನಾವೆಂದೂ ಮರೆಯಬಾರದು. ಅವರ ಮಾರ್ಗದರ್ಶನವನ್ನು ಸ್ಫೂರ್ತಿಯಾಗಿಟ್ಟುಕೊಂಡು ಜೀವನದಲ್ಲಿ ಮುಂದೆ ಸಾಗೋಣ ಎಂದರು.

ಸಮಾಜದ ವಿರೋಧಿ ಕಾರ್ಯಗಳಿಗೆ ಮುಟ್ಟುಗೋಲು ಹಾಕಲು ಅವರು ತೆಗೆದುಕೊಂಡ ಕ್ರಮಗಳು, ಆಂದೋಲನಗಳು ಅನನ್ಯ. ಕೆಳವರ್ಗದಲ್ಲಿ ಜನಿಸಿದ ಜನರಿಗೆ ದೇವಸ್ಥಾನಗಳಲ್ಲಿ ಅನುಮತಿ ಕೊಡಲು ಅವರು ಬೇಡಲಿಲ್ಲ. ಹಿಂಸಾಚಾರದ ಚಳುವಳಿಗಳನ್ನೂ ನಡೆಸದೆ, ತಾವೇ ದೇವಾಲಯಗಳನ್ನು ಸ್ಥಾಪಿಸುವುದರ ಮೂಲಕ ಒಂದು ಹೊಸ-ಅನನ್ಯ-ಆಲೋಚನಾ ಕ್ರಮವನ್ನು ಹುಟ್ಟುಹಾಕಿದರು. ಕೇರಳದಾದ್ಯಂತ ಸುಮಾರು 60ಕ್ಕೂ ಹೆಚ್ಚು ದೇವಾಲಯಗಳನ್ನು ಅವರು ಸ್ಥಾಪಿಸಿದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಮಾಜದ ಜಿಲ್ಲಾಧ್ಯಕ್ಷ ಪ್ರಕಾಶ್ ಬೊಮ್ಮನಹಳ್ಳಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ವಾರ್ತಾಧಿಕಾರಿ ವಸಂತ ಬಿ.ಮಡ್ಲೂರ ಸೇರಿದಂತೆ ಸಮಾಜದ ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷರೂ ಆಗಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಅತಿಥಿಗಳನ್ನು ಸ್ವಾಗತಿಸಿ, ಪ್ರಸ್ತಾವಿಕವಾಗಿ ಮಾತನಾಡಿದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು.

ಕೃಷಿ ಕ್ಷೇತ್ರದಲ್ಲಿ ಸಾಧನೆಗೈದ ಅನಿತಾ ಶಿವಮೂರ್ತಪ್ಪ ಕುರ್ತಕೋಟಿ, ಮಂಜುನಾಥ ರಮೇಶ ಹುಲಕೋಟಿ, ಬಸವರಾಜ ಹನುಮಂತಪ್ಪ ಈಳಗೇರ ಅವರನ್ನು ಇದೇ ಸಂಧರ್ಭದಲ್ಲಿ ಸನ್ಮಾನಿಸಲಾಯಿತು. ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆಗೈದ ಪ್ರಭು ಈಳಗೇರ, ಸಿಂಧು ಈಳಗೇರ, ಅರುಣ ಈಳಗೇರ, ಆನಂದ ಈಳಗೇರ, ಅಭಿಷೇಕ ಈಳಗೇರ, ಶೈಲಾ ಈಳಗೇರ, ಪೃಥ್ವಿ ಈಳಗೇರ, ಭೂಮಿಕಾ ಈಳಗೇರ, ಸಂಜನಾ ಈಳಗೇರ, ಬಸವರಾಜ ಈಳಗೇರ, ಸುಪ್ರಿಯಾ ಹೊಸಪೇಟೆ, ಸಮೃದ್ಧಿ ಹಾನಗಲ್, ಆಶಾ ಕುರ್ತಕೋಟಿ, ಅನನ್ಯ ಕುರ್ತಕೋಟಿ ಅವರುಗಳನ್ನು ಗೌರವಿಸಲಾಯಿತು.



ಹೊಂಬಳದ ಜಿ.ಎಚ್.ಎಸ್ ಹೆಣ್ಣುಮಕ್ಕಳ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಯಿತು. ಶಾಲೆಯ ಮುಖ್ಯೋಪಾಧ್ಯಾಯ ವಿ.ಎನ್. ಬೇಂದ್ರೆ ಹಾಗೂ ಶಿಕ್ಷಕರಾದ ಎಸ್.ಬಿ. ಗಾಣಿಗೇರ್, ಬಿ.ಎಸ್. ಹಾವನೂರ್, ಡಿ.ಬಿ. ಗಂಗಾಪುತ್ರಿ, ಪಿ.ವಿ. ಕುರಿ, ಡಿ.ಎಸ್. ಸಾವಿತ್ರಿಬಾಯಿ, ಬಸಮ್ಮ ಹೊಸಮನಿ ಎಸ್.ಡಿ.ಎಂ.ಸಿ ಅಧ್ಯಕ್ಷ ಧನಂಜಯ್ ಭಾಳಮನವರ, ಉಪಾಧ್ಯಕ್ಷೆ ಸಂಗೀತಾ ಉದಯ ಕಬ್ಬಿನ, ಸುಧಾ ಮಲ್ಲಪ್ಪ ಮನ್ನೂರ, ಶಿರಾಜಸಾಬ ಕಲೇಭಾಯಿ ಮತ್ತು ಅಲಿಅಕ್ಬರ್ ಸಂದಿಮನಿ ಭಾಗವಹಿಸಿದ್ದರು.

# ಸಮರ್ಥ ಶಿಕ್ಷಕ ರಾಷ್ಟ್ರ ರಕ್ಷಕ

■ ವಿಜಯಸಾಕ್ಷಿ ಸುದ್ದಿ, ಗದಗ

ಯಾವುದೇ ಒಂದು ರಾಷ್ಟ್ರ ಸರ್ವ ರೀತಿಯಿಂದಲೂ ಅಭಿವೃದ್ಧಿ ಸಾಧಿಸಬೇಕಾದರೆ ಪರಿಪೂರ್ಣವಾದ ಶಿಕ್ಷಣದ ಅವಶ್ಯಕತೆ ಇರುವ ಕಾರಣ, ಅದನ್ನು ಸಮರ್ಥವಾಗಿ ನಿರ್ವಹಿಸಿ ವಿದ್ಯಾರ್ಥಿಗಳನ್ನು ಶೈಕ್ಷಣಿಕ ಮಾರ್ಗದತ್ತ ನಡೆಸುವ ಕಾರ್ಯವನ್ನು ಒಬ್ಬ ಶಿಕ್ಷಕ ಮಾಡುತ್ತಾನೆ. ಆ ಮೂಲಕ ಒಬ್ಬ ಸಮರ್ಥ ಶಿಕ್ಷಕ ರಾಷ್ಟ್ರರಕ್ಷಕನಾಗಬಲ್ಲ ಎಂದು ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆಯ ಚೇರ್‌ಮನ್ ಪ್ರೋ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ನಗರದ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಆಚರಿಸಿದ 'ಶಿಕ್ಷಕರ ದಿನಾಚರಣೆ'ಯ ಸಂದರ್ಭದಲ್ಲಿ ಮಾತನಾಡಿದ ಅವರು, ಆಚರಣೆಯ ಮೂಲಕ ಗುರುವಂದನೆ ಸಲ್ಲಿಸಿದ ಸಕಲ ವಿದ್ಯಾರ್ಥಿ ವೃಂದಕ್ಕೆ ವಿದ್ಯಾಲಯದ



ಪರವಾಗಿ ಅಭಿನಂದನೆಗಳನ್ನು ಸಲ್ಲಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಇಂಗ್ಲಿಷ್ ಉಪನ್ಯಾಸಕ ಮುರಲೀಧರ ಸಂಕನೂರ, ನಿರಂತರ ಅಧ್ಯಯನವೇ ವಿದ್ಯಾರ್ಥಿಯ ಶೈಕ್ಷಣಿಕ ಪರಿಪೂರ್ಣತೆಗೆ ಬುನಾದಿ ಎಂದು ತಿಳಿಸಿದರು. ಸಂಸ್ಥೆಯ ನಿರ್ದೇಶಕರಾದ ಪ್ರೊ. ಪುನೀತ ದೇಶಪಾಂಡೆ, ಪ್ರೊ. ರೋಹಿತ ಒಡೆಯರ್, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿದರು. ಸಮಾರಂಭದಲ್ಲಿ ಆಡಳಿತಾಧಿಕಾರಿಗಳಾದ ಎಮ್.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರಾಹುಲ ಒಡೆಯರ್, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ ಹಾಗೂ ಕಾಲೇಜಿನ ಸಮಸ್ತ ಬೋಧಕ-ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಶಿಕ್ಷಕರ ದಿನಾಚರಣೆಯ ಬಗ್ಗೆ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹೇಳಿದರು. ವಿದ್ಯಾರ್ಥಿಗಳಾದ ಪ್ರಾಚಿ ಕಬಾಡಿ ಮತ್ತು ಜೀಕ್ರಾ ಸುಂಕದ ಕಾರ್ಯಕ್ರಮ ನಿರೂಪಿಸಿದರು, ಸಮರ್ಥ ಚವ್ಹಾಣ ವಂದಿಸಿದರು.

### ಬಗರ್‌ಹುಕುಂ ರೈತರ ಅಹೋರಾತ್ರಿ ಧರಣಿ । ರೈತರಿಂದ ಭಿಕ್ಷಾಟನೆ

# ಆಡಳಿತದ ರೈತ ವಿರೋಧಿ ಧೋರಣೆ ಖಂಡನೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಬಗರ್‌ಹುಕುಂ ರೈತರ ಹೋರಾಟವು 22ನೇ ದಿನಕ್ಕೆ ತಲುಪಿದ್ದು, ಸರ್ಕಾರ ರೈತರ ಬೇಡಿಕೆಗಳನ್ನು ಈಡೇರಿಸದಿರುವುದನ್ನು ಖಂಡಿಸಿ ಸೋಮವಾರ ವಿಭಿನ್ನ ಪ್ರತಿಭಟನೆ ಕೈಗೊಂಡು ನಗರದ ಗಾಂಧಿ ಸರ್ಕಲ್‌ನಿಂದ ಜಿಲ್ಲಾಡಳಿತ ಕಚೇರಿಯವರೆಗೆ ತಟ್ಟೆ ಹಿಡಿದು ಭಿಕ್ಷೆ ಬೇಡುವ ಮೂಲಕ 'ಭಿಕ್ಷಾಟನೆ' ನಡೆಸಿದರು.

ರೈತರು ಡೊಳ್ಳು ಬಾರಿಸುತ್ತಾ, ಕೈಯಲ್ಲಿ ತಟ್ಟೆ ಹಿಡಿದು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ದಾನಿಗಳಿಂದ ಹಣ, ಅಕ್ಕಿ, ತರಕಾರಿ ಮುಂತಾದ ವಸ್ತುಗಳನ್ನು ಬೇಡಿದರು. ನಂತರ ಜಿಲ್ಲಾಧಿಕಾರಿಗಳ ಕಚೇರಿ ತಲುಪಿ, ಭಿಕ್ಷೆಯಿಂದ ಸಂಗ್ರಹಿಸಿದ ರೂ. 3,750 ನಗದು ಮೊತ್ತವನ್ನು ಜಿಲ್ಲಾಧಿಕಾರಿಗಳ ನಿಧಿಗೆ ನೀಡಿ, ಯಾವ ಅಧಿಕಾರಿಗಳೂ ಬಾರದ ಕಾರಣ ಮನವಿ ನಿಲ್ಲಿಸಿ ಧರಣಿ



ಮುಂದುವರೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ಜಿಲ್ಲಾ ಉಸ್ತುವಾರಿ ಸಚಿವರು 21 ದಿನ ಕಳೆದರೂ ನಮ್ಮ ಕಡೆ ತಲೆ ಹಾಕದಿರುವುದು ಬೇಸರದ ಸಂಗತಿ. ಇನ್ನು ಎರಡು ದಿನಗಳ ಕಾಲ ಶಾಂತಿಯುತ ಹೋರಾಟ ನಡೆಸುತ್ತೇವೆ. ಆ ಬಳಿಕವೂ ಜಿಲ್ಲಾಡಳಿತದಿಂದ ಯಾವುದೇ ಸ್ಪಂದನೆ ದೊರಕದಿದ್ದಲ್ಲಿ, ಉಗ್ರ ಹೋರಾಟದ ಹಾದಿ ಹಿಡಿಯಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

> ಜಿಲ್ಲಾ ಉಸ್ತುವಾರಿ ಸಚಿವರು ಕೊಟ್ಟ ಮಾತಿನಂತೆ, ಜಿಲ್ಲಾಧಿಕಾರಿಗಳು ಸಚಿವರಿಗೆ ಮನವರಿಕೆ ಮಾಡುವ ಮೂಲಕ ಸಚಿವರನ್ನು ಕರೆಸಿ, ರೈತರ ಬೇಡಿಕೆಗಳನ್ನು ಈಡೇರಿಸಲು ಮುಂದಾಗಬೇಕು. ಆಡಳಿತದ ರೈತ ವಿರೋಧಿ ಧೋರಣೆ ಖಂಡನೀಯ. ಇದುವರೆಗೂ ಶಾಂತಿಯುತ ಹೋರಾಟಗಳನ್ನು ಮಾಡುತ್ತಾ ಬಂದಿದ್ದೇವೆ. ರೈತರ ಹೋರಾಟ ತೀವ್ರ ಸ್ವರೂಪ ಪಡೆಯುವ ಮೊದಲು ಜಿಲ್ಲಾಡಳಿತ ಎಚ್ಚೆತ್ತುಕೊಳ್ಳಬೇಕು.
>
> **- ರವಿಕಾಂತ ಅಂಗಡಿ.**
>
> ರಾಜ್ಯಾಧ್ಯಕ್ಷರು, ಉತ್ತರ ಕರ್ನಾಟಕ ಮಹಾಸಭಾ.

ಪ್ರೊ. ಎನ್.ಟಿ. ಪೂಜಾರ ಮಾತನಾಡಿ, ರೈತರು 21 ದಿನಗಳಿಂದ ಹೋರಾಟ ಮಾಡುತ್ತಿದ್ದಾರೆ. ಆದರೆ ಜಿಲ್ಲಾಧಿಕಾರಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಬಂದು ಸಮಸ್ಯೆಗಳನ್ನು ಆಲಿಸದಿರುವುದು ಖೇದಕರ. ಜಿಲ್ಲಾಡಳಿತವು ತಕ್ಷಣ ಸಚಿವರಿಗೆ ಸರಿಯಾದ ಮಾಹಿತಿಯನ್ನು ನೀಡಿ, ರೈತರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ತಾ.ಪಂ ಮಾಜಿ ಅಧ್ಯಕ್ಷ ಬಿ.ಎಸ್. ಚಿಂಚಲಿ, ನಾಮದೇವ, ಫಿರೋಜ್ ನದಾಫ್, ಎಮ್. ಶಲವಡಿ ಸೇರಿದಂತೆ ನಾಗಾವಿ, ಬೆಳಧಡಿ, ಹರ್ತಿ, ಶಿರಹಟ್ಟಿ, ಲಕ್ಷ್ಮೇಶ್ವರ, ಅಡವಿಸೋಮಾಪೂರ, ಗಜೇಂದ್ರಗಡ, ದಿಂಡೂರ, ಡೋಣಿ, ಮುರುಡಿ ಮುಂತಾದ ಗ್ರಾಮಗಳ ರೈತರು, ಮಹಿಳೆಯರು ಹಾಗೂ ಹೋರಾಟಗಾರರು ಉಪಸ್ಥಿತರಿದ್ದರು.

# ಲಕ್ಷ ದೀಪೋತ್ಸವ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೀರಶೈವ ಲೈಬ್ರರಿ ಬಳಿಯಲ್ಲಿರುವ ಶ್ರೀ ಸುದರ್ಶನ ಚಕ್ರ ಯುವಕ ಮಂಡಳಿ ವತಿಯಿಂದ ಪ್ರತಿಷ್ಠಾಪಿಸಿ 21 ದಿನಗಳ ಕಾಲ ಪೂಜಿಸುವ ಹಿಂದೂ ಮಹಾಗಣಪತಿ ಸನ್ನಿಧಿಯಲ್ಲಿ ಸೆ. 9ರಂದು ಸಂಜೆ 6 ಗಂಟೆಗೆ ಲೋಕ ಕಲ್ಯಾಣಾರ್ಥವಾಗಿ ಲಕ್ಷ ದೀಪೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಸೂಡಿ ಜುಕ್ತಿಹಿರೇಮಠದ ಡಾ. ಕೊಟ್ಟೂರಬಸವೇಶ್ವರ ಶಿವಾಚಾರ್ಯರು ವಹಿಸುವರು. ಮುಖ್ಯ ಅತಿಥಿಗಳಾಗಿ ಸಾರಿಗೆ ಸಂಸ್ಥೆ ಮಾಜಿ ನಿರ್ದೇಶಕ ಶರಣ್ ಪಾಟೀಲ, ಭಾರತ ಸರ್ಕಾರದ ಆಹಾರ ನಿಗಮದ ಸದಸ್ಯ ರವಿ ದಂಡಿನ, ಹುಬ್ಬಳ್ಳಿ ವಿಎಕೆ ಫೌಂಡೇಶನ್‌ನ ಅಧ್ಯಕ್ಷ ವೆಂಕಟೇಶ ಕಾಟವೆ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಿಗೆ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ) ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ 2025-26ನೇ ಸಾಲಿನಲ್ಲಿ ಆನ್ ಲೈನ್ ಮೂಲಕ https:shp.karnataka.gov.in/bcwd ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 4 ಕೊನೆಯ ದಿನವಾಗಿದೆ. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗದಗ ಕಚೇರಿ ದೂರವಾಣಿ ಸಂಖ್ಯೆ 08372-237414 ಸಂಪರ್ಕಿಸಬಹುದಾಗಿದೆ.

### ಸೆ.10ಕ್ಕೆ ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ

# ತಾಲೂಕಾ ಮಟ್ಟದ ಅಧಿಕಾರಿಗಳಲ್ಲಿ ತಳಮಳ!

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚಿನ ಕೆಲ ದಿನಗಳಲ್ಲಿ ಶಿರಹಟ್ಟಿ ಪಟ್ಟಣದ ತಹಸೀಲ್ದಾರ ಕಚೇರಿ, ಭೂ ದಾಖಲೆಗಳ ಕಚೇರಿ, ಉಪ ನೋಂದಣಾಧಿಕಾರಿಗಳ ಕಚೇರಿ, ಪಟ್ಟಣ ಪಂಚಾಯಿತಿ ಹಾಗೂ ತಾಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿ ಹೋಬಳಿ ಮಟ್ಟದ ಜನಸಂಪರ್ಕ ಸಭೆ, ವಸತಿ ಶಾಲೆಗಳಿಗೆ ಭೇಟಿ ಹೀಗೆ ಹತ್ತು ಹಲವು ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಇದೀಗ ಸೆ.10ಕ್ಕೆ ಶಿರಹಟ್ಟಿಯ ತಹಸೀಲ್ದಾರ ಕಚೇರಿಯ ಸಭಾಭವನದಲ್ಲಿ ಮತ್ತೆ ಲೋಕಾಯುಕ್ತ ಜನಸಂಪರ್ಕ ಸಭೆ ನಡೆಯುತ್ತಿರುವುದು ತಾಲೂಕಾ ಮಟ್ಟದ ಅಧಿಕಾರಿಗಳಲ್ಲಿ ತಳಮಳ ಮೂಡಿಸುತ್ತಿದೆ.

ಯಾವುದೇ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕ ನೌಕರರು ನ್ಯಾಯಯುತವಾದ ಕೆಲಸ ಮಾಡಿಕೊಡಲು ವಿಳಂಬ ನೀತಿ ಅನುಸರಿಸುತ್ತಿದ್ದರೆ, ಸರ್ಕಾರದ ಯೋಜನೆಗಳನ್ನು ಅರ್ಹ



ಫಲಾನುಭವಿಗಳಿಗೆ ತಲುಪಿಸಲು ತಾರತಮ್ಯ ಮಾಡುತ್ತಿದ್ದರೆ, ಕೆಲಸ ಮಾಡಿಕೊಡಲು ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದಲ್ಲಿ ಮತ್ತು ಅಧಿಕಾರಿಗಳು ಅಕ್ರಮವಾಗಿ ಆಸ್ತಿಗಳನ್ನು ಹೊಂದಿದ್ದರೆ ಹಾಗೂ ಕಳಪೆ ಕಾಮಗಾರಿ, ಹಣ ದುರುಪಯೋಗದ ಪ್ರಕರಣಗಳು ಕಂಡುಬಂದಲ್ಲಿ ಲಿಖಿತ ರೂಪದಲ್ಲಿ ಲೋಕಾಯುಕ್ತ ಅಧಿಕಾರಿಗಳಿಗೆ ಜನಸಂಪರ್ಕ ಸಭೆಯಲ್ಲಿ ದೂರು ನೀಡಬಹುದಾಗಿದೆ.

ಸರಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದು ಸಾರ್ವಜನಿಕರ ಗಮನಕ್ಕೆ ಬಂದರೆ ಲಿಖಿತವಾಗಿ ದೂರು ಸಲ್ಲಿಸಬಹುದಾಗಿದ್ದು, ಈ ಸಂದರ್ಭದಲ್ಲಿ ದೂರುದಾರರಿಗೆ ಮತ್ತು ಸಾಕ್ಷಿದಾರರಿಗೆ ಸಂಪೂರ್ಣ ರಕ್ಷಣೆ ನೀಡುವುದಾಗಿ ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ. ಸಾರ್ವಜನಿಕರು ಇಂತಹ ಜನಸಂಪರ್ಕ ಸಭೆಗಳ ಸದುಪಯೋಗವನ್ನು ಪಡೆದುಕೊಂಡಾಗ ಸಭೆಗಳ ಉದ್ದೇಶ ಸಾರ್ಥಕವಾಗಲಿದೆ.

ಸೆ.10ರಂದು ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯಕುಮಾರ ಬಿರಾದಾರ ನೇತೃತ್ವದಲ್ಲಿ ನಡೆಯಲಿರುವ ಲೋಕಾಯುಕ್ತ ಜನಸಂಪರ್ಕ ಸಭೆಯ ಕುರಿತು ಈಗಾಗಲೇ ಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸಲಾಗಿದ್ದು, ಸ್ಥಳೀಯವಾಗಿ ಪಟ್ಟಣ ಪಂಚಾಯಿತಿ ವತಿಯಿಂದ ಧ್ವನಿವರ್ಧಕದ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ. ಗದಗ ಲೋಕಾಯುಕ್ತ ತಂಡದ ವತಿಯಿಂದಲೂ ವಾಟ್ಸಾಪ್ ಗ್ರೂಪ್ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಸಭೆಯ ಮಾಹಿತಿ ನೀಡಲಾಗುತ್ತಿದೆ.

ಶಿರಹಟ್ಟಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಸರಕಾರಿ ಕಚೇರಿಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಹಾಗೂ ಸಾರ್ವಜನಿಕ ಅಹವಾಲು ಸಭೆಗಳಲ್ಲಿ ಹೆಚ್ಚಾಗಿ ಮೌಖಿಕವಾಗಿ ದೂರುಗಳು ಕೇಳಿ ಬರುತ್ತಿದ್ದು, ಲಿಖಿತ ದೂರುಗಳು ಕಡಿಮೆ ಬರುತ್ತಿರುವುದಾಗಿ ಅಧಿಕಾರಿಗಳು ಹೇಳುತ್ತಿದ್ದಾರೆ. ಭೇಟಿ ಸಮಯದಲ್ಲಿ ಅಧಿಕಾರಿಗಳ ಲೋಪದೋಷಗಳು ಕಂಡು ಬಂದಿರುವ ಬಗ್ಗೆ ಅವರ ಮೇಲಾಧಿಕಾರಿಗಳಿಗೆ ಈಗಾಗಲೇ ವರದಿ ಸಲ್ಲಿಸಿದ್ದು, ಅಂತವರಿಗೆ ಇಲಾಖೆಗಳ ವತಿಯಿಂದ ಈಗಾಗಲೇ ನೋಟೀಸ್ ಕೂಡಾ ಜಾರಿಯಾಗಿವೆ. ಸಾರ್ವಜನಿಕರು ಇಂತಹ ಸಭೆಗಳನ್ನು ಸದುಪಯೋಗಪಡಿಸಿಕೊಳ್ಳಲು ಮುಂದಾಗಬೇಕೆಂದು ಲೋಕಾಯುಕ್ತ ಅಧಿಕಾರಿಗಳು ಹೇಳಿದ್ದಾರೆ.

> ಈ ಕುರಿತು ಪ್ರತಿಕ್ರಿಯಿಸಿದ ಗದಗ ಲೋಕಾಯುಕ್ತ ಡಿಎಸ್ಪಿ ವಿಜಯಕುಮಾರ ಬಿರಾದಾರ, ಸರಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ-ಕಾರ್ಯಗಳಿಗೆ ಅಲೆದಾಡಿಸುತ್ತಿದ್ದರೆ, ಲಂಚಕ್ಕೆ ಬೇಡಿಕೆ ಇಟ್ಟಿದ್ದರೆ ಅಂತಹವರು ಲಿಖಿತವಾಗಿ ದೂರು ಸಲ್ಲಿಸಬಹುದಾಗಿದೆ. ದೂರುದಾರರಿಗೆ ಮತ್ತು ಸಾಕ್ಷಿದಾರರಿಗೆ ಸಂಪೂರ್ಣ ರಕ್ಷಣೆ ನೀಡಲಾಗುವುದು. ದೂರು ಸಲ್ಲಿಸಲು ಹಿಂಜರಿಯಬಾರದು, ಭಯಕ್ಕೆ ಒಳಗಾಗಬಾರದು. ಇಂತಹ ಸಭೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು.

# ಡಿ.ಜೆ ನಮ್ಮ ಸಂಸ್ಕೃತಿಯಲ್ಲ

▸▸ ಮೊದಲನೇ ಪುಟದಿಂದ

ಅರ್ಥಪೂರ್ಣ, ಸಮಾಜೋಪಯೋಗಿಯಾಗಿರಬೇಕು. ಆಚರಣೆಗಳ ನೆಪದಲ್ಲಿ ಸಾಮಾಜಿಕ ಸ್ವಾಸ್ಥ್ಯ, ನೆಮ್ಮದಿ, ಶಾಂತಿ ಕಾಪಾಡುವ ನಿಟ್ಟಿನಲ್ಲಿ ಸಾರ್ವಜನಿಕರು ಪೊಲೀಸರ ಕಾರ್ಯಕ್ಕೆ ಸಹಕರಿಸಬೇಕು ಎಂದರು.

ಈ ವೇಳೆ ಕವಿತಾ ಶರಸೂರಿ, ಶೋಭಾ ಮೆಣಸಿನಕಾಯಿ, ವಾಣಿ ಹತ್ತಿ, ಮಂಜುಳಾ ಗುಂಜಳ, ಮಹಾದೇವಪ್ಪ ಅಣ್ಣಿಗೇರಿ, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರಣ್ಣ ಪಾಟೀಲ ಕುಲಕರ್ಣಿ, ಚಂಬಣ್ಣ ಬಾಳಿಕಾಯಿ, ಸಿದ್ದನಗೌಡ ಬಳ್ಳೊಳ್ಳಿ, ಶಿವಯೋಗಿ ಅಂಕಲಕೋಟಿ, ಪೂರ್ಣಾಜಿ ಖರಾಟೆ, ಪ್ರಕಾಶ ಮುಳಗುಂದ, ಸುರೇಶ ಚೌಕನವರ, ಗಂಗಾಧರ ಉಮಚಗಿ, ಬಸವರಾಜ ಮೆಣಸಿನಕಾಯಿ, ಗಂಗಾಧರ ಶಿಗ್ಲಿಮಠ, ಬಸವಣ್ಣೆಪ್ಪ ನಂದೆಣ್ಣವರ, ಮಯೂರಗೌಡ ಪಾಟೀಲ, ಸಂತೋಷ ಜಾವೂರ, ಶಿವು ಹೊಟ್ಟಿ, ರಾಜಶೇಖರ ಶಿಗ್ಲಿಮಠ, ಚಂದ್ರು ಹುರಕಡ್ಲಿ, ನೀಲಪ್ಪ ಯತ್ನಳ್ಳಿ, ಭರಮಪ್ಪ ಕೊಡ್ಲಿ, ಈರಣ್ಣ ಆದಿ, ರಾಮಣ್ಣ ಗೌರಿ ಸೇರಿದಂತೆ ಸಮಿತಿ ಸದಸ್ಯರು, ಸಾರ್ವಜನಿಕರು ಇದ್ದರು.

# ಕಲಾವಿದರ ಬೇಡಿಕೆಗಳ ಈಡೇರಿಕೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ


ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ದೊರೆಯಬಹುದಾದ ವಿವಿಧ ಸೌಲಭ್ಯಗಳಿಗಾಗಿ ಸೆ. 10ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಸಾಂಸ್ಕೃತಿಕ ಸಂಘಟನೆಗಳು ಹಾಗೂ ಜಿಲ್ಲೆಯ ಕಲಾವಿದರಿಂದ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ಎಸ್.ತಂಗಡಗಿ ಅವರಿಗೆ ಮನವಿ ಅರ್ಪಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಭಾಗವಹಿಸುವ ಸಂಘಟನೆಗಳ ಮುಖ್ಯಸ್ಥರು ಮತ್ತು ಕಲಾವಿದರು ಸೆ. 10ರಂದು ಬೆಳಿಗ್ಗೆ 10.30 ಗಂಟೆಗೆ ಗದಗ ನಗರದ ಪ್ರವಾಸಿ ಮಂದಿರಕ್ಕೆ ಆಗಮಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರ ಮೊ-9740052017, ಕಲಾವಿದರಾದ ಮೌನೇಶ ಚಿ. ಬಡಿಗೇರ(ನರೇಗಲ್ಲ) ಮೊ-9972391031 ಮತ್ತು ಕಲಾವಿದರಾದ ಸೋಮು ಚಿಕ್ಕಮಠ ಮೊ-7899325108 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

# ನಿಧನ

## ಶರಣಬಸಪ್ಪ ಪಲ್ಲೇದ



**ನರೇಗಲ್ಲ:** ಸಮೀಪದ ಅಬ್ಬಿಗೇರಿ ಗ್ರಾಮದ ನಿವೃತ್ತ ಶಿಕ್ಷಕ ಶರಣಬಸಪ್ಪ ಗುರುಸಿದ್ದಪ್ಪ ಪಲ್ಲೇದ (87) ಸೋಮವಾರ ನಿಧನ ಹೊಂದಿದರು.

ಅವರಿಗೆ ಪುತ್ರ ಸೇರಿದಂತೆ ಅಪಾರ ಬಂಧು-ಬಳಗವಿದೆ.

# ಶಿಕ್ಷಕ ಸಂಘಟನೆಗೆ ಶಕ್ತಿ ತುಂಬೋಣ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಸಂಸ್ಥೆಗಳಲ್ಲಿ ಅನೇಕ ಶಿಕ್ಷಕರು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಸಮಸ್ಯೆಗಳ ಪರಿಹಾರಕ್ಕೆ ಶಿಕ್ಷಕ ಸಂಘಟನೆಗೆ ಬಲಪಡಿಸುವ ಮೂಲಕ ಶಕ್ತಿ ತುಂಬೋಣ ಎಂದು ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ, ಹುಬ್ಬಳ್ಳಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಆರ್. ಭಟ್ ಹೇಳಿದರು.

ಅವರು ಭಾನುವಾರ ತಾಲೂಕಿನ ಶಿಗ್ಲಿಯ ಜಿಎಸ್‌ಎಸ್ ಹೈಸ್ಕೂಲ್‌ನಲ್ಲಿ ನಡೆದ ಮಾಧ್ಯಮಿಕ ಶಾಲಾ ನೌಕರರ ಸಂಘದ ಸಭೆಯಲ್ಲಿ ಮಾತನಾಡಿದರು.

ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕರು ಹತ್ತಾರು ಸಮಸ್ಯೆಗಳನ್ನು ಅನುಭವಿಸುತ್ತಿದ್ದು, ಶಿಕ್ಷಕರು ಸಂಘಟಿತರಾಗಿ ಸರ್ಕಾರದ ಮುಂದೆ ಬೇಡಿಕೆಗಳನ್ನಿಟ್ಟಾಗ ಮಾತ್ರ ಸರ್ಕಾರ ಪರಿಗಣಿಸುತ್ತದೆ. ಶಿಕ್ಷಕರ ಧ್ವನಿಯಾಗಿ ಸಭಾಪತಿಗಳಾದ ಬಸವರಾಜ ಹೊರಟ್ಟಿ ಇರುವುದು ನಮಗೆಲ್ಲ ಬಲ ತಂದಿದೆ ಎಂದರು.

ಈ ವೇಳೆ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಎಂ.ಕೆ. ಲಮಾಣಿ, ಜಿಲ್ಲಾ ಪ್ರ.ಕಾರ್ಯದರ್ಶಿ ಎ.ಎಸ್. ಪಾಟೀಲ, ಕೇಂದ್ರ ಸಮಿತಿ ಸದಸ್ಯ ಡಿ.ಎನ್. ಮರಡ್ಡಿ, ಜಿಲ್ಲಾ ಉಪಾಧ್ಯಕ್ಷ ಬೂದಪ್ಪ ಅಂಗಡಿ, ಭೀಮಪ್ಪ ಯರಗೊಪ್ಪ, ಲಕ್ಷ್ಮೇಶ್ವರ ತಾಲೂಕಾ ಘಟಕದ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ, ಕಾರ್ಯದರ್ಶಿ ಗಿರೀಶ ಸುಗುಜಾನವರ, ಶಿರಹಟ್ಟಿ ತಾಲೂಕು ಘಟಕದ ಅಧ್ಯಕ್ಷ ಎಚ್.ಟಿ. ಬಿಜ್ಜೂರ ಮುಂತಾದವರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಶಿವರಾಮಕೃಷ್ಣ ಸೇವಾ ಸಮಿತಿ ಅಧ್ಯಕ್ಷ ರಾಜು ಖಾನಪ್ಪನವರ ಆಗ್ರಹ

# ನ್ಯಾಯಾಲಯದ ಆದೇಶವನ್ನು ಎಲ್ಲರೂ ಪಾಲಿಸಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಧ್ವನಿವರ್ಧಕ ಬಳಕೆಯ ವಿಚಾರವಾಗಿ ಸುಪ್ರೀಂ ಕೋರ್ಟ್ ಆದೇಶವನ್ನು ಎಲ್ಲರೂ ಪಾಲಿಸಬೇಕು. ಆದರೆ, ಈ ಕಾನೂನು ಕೇವಲ ಹಿಂದೂಗಳ ಹಬ್ಬಗಳಿಗೆ ಮಾತ್ರ ಸೀಮಿತವಾಗಬಾರದು ಎಂದು ಶಿವರಾಮಕೃಷ್ಣ ಸೇವಾ ಸಮಿತಿ ಅಧ್ಯಕ್ಷ ರಾಜು ಖಾನಪ್ಪನವರ ಆಗ್ರಹಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಈದ್ ಮಿಲಾದ್ ಸಂದರ್ಭದಲ್ಲಿ ಮುಸ್ಲಿಂ ಸಂಘಟನೆಗಳು ಡಿಜೆ ಬಂದ್ ಮಾಡಿ ಸುಪ್ರಿಂಕೋರ್ಟ್ ಆದೇಶ ಪಾಲಿಸಿರುವುದು ಸಂತಸದ ವಿಚಾರ. ಆದರೆ, ಹಿಂದೂಗಳ ಹಬ್ಬದ ಸಂದರ್ಭದಲ್ಲಿ ಮಾತ್ರ ಈ ನಿಯಮ ಪಾಲನೆಯಾಗಬಾರದು.




ಪ್ರತಿನಿತ್ಯವೂ ಹಿಂದೂ ಮತ್ತು ಮುಸ್ಲಿಮರು ಸೇರಿದಂತೆ ಎಲ್ಲರೂ ಈ ಆದೇಶವನ್ನು ಪಾಲಿಸಬೇಕಿದೆ ಎಂದರು.

ಕರ್ನಾಟಕ ಸಂಭ್ರಮ ಕಾರ್ಯಕ್ರಮದಲ್ಲಿ ಮೂರು ದಿನ ಬೆಳಗಿನ ಜಾವದವರೆಗೂ ಡಿಜೆ ಬಳಸಲಾಗಿತ್ತು. ಆದರೆ ಈಗ ಉಳಿದವರು ಡಿಜೆ ಬಳಸಲು ತಡೆ ನೀಡುವುದು ಸರಿಯಲ್ಲ. ಕರ್ನಾಟಕ ಸಂಭ್ರಮದ ವೇಳೆ ಬಳಸಿದ ಡಿಜೆ ಬಳಸಿದಾಗ ಎಷ್ಟು ಡೆಸಿಬಲ್ ಶಬ್ದ ಹೊರಹೊಮ್ಮಿತು ಎಂಬುದನ್ನು ನೋಡಿಕೊಳ್ಳಲಿ ಎಂದು ಸವಾಲು ಹಾಕಿದರು.

ಧ್ವನಿವರ್ಧಕಗಳನ್ನು ರಾತ್ರಿ 10 ಗಂಟೆಯ ನಂತರ ಬಳಸಬಾರದು ಎಂಬ ನಿಯಮವಿದ್ದರೂ, ಮಸೀದಿಗಳಲ್ಲಿ ಬೆಳಗಿನ ಜಾವ 3-4 ಗಂಟೆಗೆ ಅಜಾನ್ ಕೂಗಲಾಗುತ್ತದೆ. ನ್ಯಾಯಾಲಯ, ಜಿಲ್ಲಾಧಿಕಾರಿ ಕಚೇರಿ ಮತ್ತು ಎಸ್‌ಪಿ ಕಚೇರಿ ಪಕ್ಕದಲ್ಲೇ ನ್ಯಾಯಾಲಯದ ಕಲಾಪಗಳು ನಡೆಯುವಾಗಲೂ ಅಜಾನ್ ಧ್ವನಿ ಕೇಳಿಸುತ್ತದೆ.

ಜಿಲ್ಲಾ ಆಸ್ಪತ್ರೆಯ ಪಕ್ಕದಲ್ಲೂ ದಿನಕ್ಕೆ 5 ಬಾರಿ ಅಜಾನ್ ಕೂಗುವುದರಿಂದ ರೋಗಿಗಳಿಗೆ ತೊಂದರೆಯಾಗುತ್ತಿದ್ದರೂ ಪೊಲೀಸರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು.

ಮುಸ್ಲಿಂ ಸಮಾಜದವರು ಸುಪ್ರೀಂಕೋರ್ಟ್ ಆದೇಶವನ್ನು ಉಲ್ಲಂಘಿಸಿದ್ದಾರೆ. ಖಾಸಗಿಯಾಗಿ ಡಿಜೆ ಬಳಸುವುದು ಬೇಡ ಎನ್ನುವ ನಿರ್ಣಯವನ್ನು ಬಹಿರಂಗವಾಗಿ ಹೇಳಿ, ನಮ್ಮ ಎಲ್ಲ ಹಬ್ಬಗಳನ್ನು ಹಾಳು ಮಾಡಿದ್ದಾರೆ.

ರಾಜ್ಯ ಸರಕಾರ ಹಿಂದೂಗಳ ಹಬ್ಬವನ್ನು ಹತ್ತಿಕ್ಕುವ ಪ್ರಯತ್ನ ಮಾಡುತ್ತಿದೆ. ಪೊಲೀಸರು ಗಣೇಶ ವಿಸರ್ಜನೆ ಸಂದರ್ಭದಲ್ಲಿ ರಾಜಾರೋಷವಾಗಿ ಡಿಜೆ ಬಂದ್ ಮಾಡಿದ್ದಾರೆ. ಪೊಲೀಸರಿಗೆ ಧೈರ್ಯವಿದ್ದರೆ ಮಸೀದಿ ಮೇಲಿನ ಧ್ವನಿವರ್ಧಕ ಬಂದ್ ಮಾಡಿಸಲಿ ಎಂದು ಸವಾಲು ಹಾಕಿದರು.

ಸುದ್ದಿಗೋಷ್ಠಿಯಲ್ಲಿ ರಾಜು ಡಮಾಮ, ರಾಚೋಟಿ ಕಾಡಪ್ಪನವರ, ಶಿವಯೋಗಿ ಹಿರೇಮಠ, ವಿಶ್ವನಾಥ ಶೀರಿ, ರಾಜು ಗದ್ದಿ, ಕಿರಣ ಹಿರೇಮಠ, ಮತ್ತು ವಿಶಾಲ ಗೋಕಾವಿ ಉಪಸ್ಥಿತರಿದ್ದರು.

> ಸೆ. 19ರಂದು ನಡೆಯುವ ಈದ್ ಮಿಲಾದ್ ಆಚರಣೆಗೆ ಅವಕಾಶ ನೀಡಬಾರದು. ಒಂದು ವೇಳೆ ಅವಕಾಶ ನೀಡಿದರೆ, ಹಿಂದೂ ಸಂಘಟನೆಗಳಿಂದ ಅದನ್ನು ತಡೆಯುವ ಪ್ರಯತ್ನ ಮಾಡುತ್ತೇವೆ. ಡಿಜೆ ಬಳಕೆಯಿಂದ 2 ಲಕ್ಷ ರೂ ಉಳಿತಾಯವಾಗಲಿದೆ ಎಂದ ಮುಸ್ಲಿಂ ಮುಖಂಡರು ಬಹಿರಂಗವಾಗಿಯೇ ಹೇಳಿದ್ದಾರೆ. ಹೀಗಾಗಿ ಆ ಉಳಿತಾಯದ ಹಣ ಏನು ಮಾಡಿದರು ಎನ್ನುವ ಲೆಕ್ಕ ಕೊಡಬೇಕು.
>
> **– ರಾಜು ಖಾನಪ್ಪನವರ.**
> ಶಿವರಾಮಕೃಷ್ಣ ಸೇವಾ ಸಮಿತಿ ಅಧ್ಯಕ್ಷ.

# ಕೆರೆ ಒತ್ತುವರಿ ಕುರಿತು ತನಿಖೆಯಾಗಲಿ




■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರ ತಾಲೂಕಿನ ಹಿರೇಮಲ್ಲಾಪುರ ಗ್ರಾಮದಲ್ಲಿ ಖಾಸಗಿ ಎಥೆನಾಲ್ ಕಂಪನಿಯೊಂದು ಮೋಸದಿಂದ ರೈತರ ಜಮೀನು ಖರೀದಿಸಿ, ನೂರಾರು ವರ್ಷಗಳ ಇತಿಹಾಸ ಹೊಂದಿರುವ ಕೆರೆಯನ್ನು ಒತ್ತುವರಿ ಮಾಡಿಕೊಂಡು ಅದನ್ನು ಮುಚ್ಚುವ ಕೆಲಸ ಮಾಡುತ್ತಿದೆ ಎಂದು ಜಯ ಕರ್ನಾಟಕ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ಚವ್ಹಾಣ ಆರೋಪಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಶತಮಾನಗಳಿಂದ ಇದ್ದ ಕೆರೆಯನ್ನು ಒತ್ತುವರಿ ಮಾಡಿಕೊಂಡಿರುವ ಕುರಿತು ತನಿಖೆಯಾಗಬೇಕು. ಈ ಬಗ್ಗೆ ಪ್ರಶ್ನಿಸುವವರಿಗೆ ಕೆಲ ಬಂಡವಾಳಶಾಹಿಗಳು ಬೆದರಿಕೆ ಒಡ್ಡುವ ಪ್ರಯತ್ನ ಮಾಡುತ್ತಿದ್ದಾರೆ. ಹೀಗಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಬಗ್ಗೆ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು.

ಮಧ್ಯವರ್ತಿಗಳ ಮೂಲಕ ರೈತರಿಂದ ಸುಮಾರು 37 ಎಕರೆಗೂ ಹೆಚ್ಚು ಭೂಮಿಯನ್ನು ಖರೀದಿ ಮಾಡಲಾಗಿದೆ. ಎಥೆನಾಲ್ ಉತ್ಪಾದನೆಯಿಂದ ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ. ಎಥೆನಾಲ್ ಉತ್ಪಾದನೆಗೆ ಅಪಾರ ಪ್ರಮಾಣದ ನೀರಿನ ಅಗತ್ಯವಿದ್ದು, ಘಟಕದ ತ್ಯಾಜ್ಯದಿಂದ ಜಲಮೂಲಕ್ಕೆ ಹಾನಿಯಾಗಲಿದೆ. ಸದರಿ ಘಟಕ ಆರಂಭವಾದರೆ ಪರಿಸರಕ್ಕೆ ಹಾನಿಯಾಗುವ ಸಾಧ್ಯತೆಯಿದೆ ಎಂದು ಆರೋಪಿಸಿದರು.

ಕೆರೆ ಒತ್ತುವರಿ ಮತ್ತು ಈ ಘಟಕದಿಂದ ರೈತರು ಮತ್ತು ಪರಿಸರಕ್ಕೆ ಆಗುತ್ತಿರುವ ಹಾನಿ ಖಂಡಿಸಿ ಸೆ. 12ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಗ್ಗೆ 11 ಗಂಟೆಗೆ ಮುಳಗುಂದ ನಾಕಾದಿಂದ ಜಿಲ್ಲಾಧಿಕಾರಿಗಳ ಕಚೇರಿ ವರೆಗೆ ಪಾದಯಾತ್ರೆ ನಡೆಸಿ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಯ ಕರ್ನಾಟಕ ಸಂಘಟನೆ ಪದಾಧಿಕಾರಿಗಳಾದ ಈಶಪ್ಪ ನಾಯ್ಕರ್, ಬಾಷಾಸಾಬ ಮಲ್ಲಸಮುದ್ರ, ವಿಕಾಸ ಕ್ಷೀರಸಾಗರ, ರಮೇಶ ಹಂಗನಕಟ್ಟಿ, ಶರೀಫ್ ಬೆನಕಲ್ಲ, ಹೊಳಲಪ್ಪ ತಳವಾರ, ಈಶ್ವರ ಲಕ್ಷ್ಮೇಶ್ವರ, ರಜಾಕ್ ಮಹಮ್ಮದ, ಬಸವರಾಜ ಕಡಕೋಳ, ನಾಗರಾಜ ಉಪ್ಪಾರ, ಹಾಲಪ್ಪ ಭಂಡಾರಿ, ರಮೇಶ ರಾಠೋಡ ಉಪಸ್ಥಿತರಿದ್ದರು.

### ಪೈಪ್‌ಲೈನ್ ಕಾಮಗಾರಿ ಪರಿಶೀಲಿಸಿದ ಶಾಸಕ ಡಾ. ಚಂದ್ರು ಲಮಾಣಿ

# 20 ಕೆರೆಗಳನ್ನು ತುಂಬಿಸುವ ಯೋಜನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತುಂಗಭದ್ರಾ ನದಿಯಿಂದ ತಾಲೂಕಿನ 20 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಪೈಪ್‌ಲೈನ್ ಕಾಮಗಾರಿಯನ್ನು ಸೋಮವಾರ ಶಾಸಕ ಡಾ. ಚಂದ್ರು ಲಮಾಣಿ ಪರಿಶೀಲಿಸಿದರು.

ಲಕ್ಷ್ಮೇಶ್ವರ-ಬಟ್ಟೂರು ಮಾರ್ಗದಲ್ಲಿ ನಡೆಯುತ್ತಿರುವ ಪೈಪ್‌ಲೈನ್ ಅಳವಡಿಕೆ ಕಾಮಗಾರಿ ಪರಿಶೀಲಿಸಿದ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿ, 2017ರಲ್ಲಿ ಆರಂಭಗೊಂಡಿರುವ ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲೂಕಿನ 20 ಬೃಹತ್ ಕೆರೆಗಳನ್ನುತುಂಬಿಸುವ ಯೋಜನೆಯ ಕಾಮಗಾರಿ ಅಧಿಕಾರಿಗಳು ಮತ್ತು ಗುತ್ತಿಗೆದಾರರ ನಿರ್ಲಕ್ಷ್ಯದಿಂದ ನೆನೆಗುದಿಗೆ ಬಿದ್ದು ವಿಳಂಬವಾಗಿತ್ತು. 140 ಕೋಟಿ ರೂ ವೆಚ್ಚದಲ್ಲಿ ಹೊಳೆಇಟಗಿ ಗ್ರಾಮದ ಹತ್ತಿರ ಹರಿಯುತ್ತಿರುವ ತುಂಗಭದ್ರಾ ನದಿಯ ದಡದಲ್ಲಿ ಜಾಕ್‌ವೆಲ್ ನಿರ್ಮಿಸಿ ಅಲ್ಲಿಂದ ನೀರನ್ನು ಎತ್ತುವಳಿ ಮಾಡಲಾಗುತ್ತದೆ. ತಾಲೂಕಿನ ಹೊಳಲಮ್ಮ ದೇವಿ ಗುಡ್ಡದ ಮೇಲೆ ಜಲಸಂಗ್ರಹಗಾರ ನಿರ್ಮಿಸಿ ಅಲ್ಲಿಂದ ಗ್ರ್ಯಾವಿಟಿಯ ಮೂಲಕ ತಾಲೂಕಿನ ಪ್ರಮುಖ 20 ಕೆರೆಗಳನ್ನು ತುಂಬಿಸುವ ಯೋಜನೆ ಇದಾಗಿದೆ ಎಂದು ಹೇಳಿದರು.



ಮಂಗಳೂರಿನ ಓಶಿಯನ್ ಕಂಪನಿಯು ಗುತ್ತಿಗೆ ಪಡೆದು ಅರ್ಧ ಕಾಮಗಾರಿ ಮಾಡಿದ್ದರೂ ಸುಮಾರು 115 ಕೋಟಿ ರೂ ಬಿಲ್ ತೆದುಕೊಂಡಿದ್ದಾರೆ. ಈ ಬಗ್ಗೆ ಸಂಬಂಧಪಟ್ಟ ಸಚಿವರಿಗೆ ಮತ್ತು ಅಧಿಕಾರಿಗಳಿಗೆ ಒತ್ತಡ ತಂದಿದ್ದರ ಫಲವಾಗಿ ಕಾಮಗಾರಿ ಮತ್ತೆ ಆರಂಭಿಸಲಾಗಿದೆ. ಸ್ಥಳೀಯ ಅಧಿಕಾರಿಗಳಿಗೆ, ಗುತ್ತಿಗೆದಾರರಿಗೆ ಬಿಸಿ ಮುಟ್ಟಿಸಿ 3-4 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಒತ್ತಾಯಿಸಲಾಗಿದ್ದು, ಈಗ ಮತ್ತೆ ಕಾಮಗಾರಿ ಪ್ರಗತಿ ಹಂತದಲ್ಲಿದೆ ಎಂದರು.

ನೀರಾವರಿ ಇಲಾಖೆಯ ಅಧಿಕಾರಿಗಳು ಗುಣಮಟ್ಟದ ಕಾಮಗಾರಿ ನಡೆಯುತ್ತಿರುವ ಬಗ್ಗೆ ಪರಿಶೀಲನೆ ನಡೆಸಬೇಕು ಹಾಗೂ ಶೀಘ್ರದಲ್ಲಿ ಕಾಮಗಾರಿ ಮುಗಿಸಿ, ಬೇಸಿಗೆ ಕಾಲದಲ್ಲಿ ಕೆರೆ ತುಂಬಿಸಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಸಿಗುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

# ಆರ್‌ಎಸ್‌ಎಸ್‌ನಿಂದ ಗಜವಂದನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಲಕ್ಷ್ಮೇಶ್ವರ ನಗರ ಘಟಕದಿಂದ ಸ್ವಯಂ ಸೇವಕರು ಭಾನುವಾರ ಪಟ್ಟಣದಲ್ಲಿನ ಅಂಬೇಡ್ಕರ ನಗರ, ತೇರಿನ ಮನೆ, ಸೊಪ್ಪಿನಕೇರಿ, ಹಾವಳಿ ಆಂಜನೇಯ, ಬಸ್ತಿಬಣದ ಸಾರ್ವಜನಿಕ ಗಣೇಶ ಮೂರ್ತಿ ಪ್ರತಿಷ್ಠಾಪನೆ ಸ್ಥಳಗಳಿಗೆ ತೆರಳಿ ಗಣೇಶ/ಗಜ ವಂದನೆ ಸಲ್ಲಿಸಿದರು. ಗಣವೇಷಧಾರಿ ಸ್ವಯಂ ಸೇವಕರು ಘೋಷ ಸಹಿತ ಪಥಸಂಚಲನದ ಮೂಲಕ ಗಜವಂದನೆ ಸಲ್ಲಿಸಲು ಆಗಮಿಸುವ ಮಾರ್ಗವನ್ನು ಸ್ವಚ್ಛಗೊಳಿಸಿ, ರಂಗೋಲಿ ಬಿಡಿಸಿ ಹೂಗಳಿಂದ ಅಲಂಕರಿಸಿದ್ದರು. ಕೇಸರಿ ಧ್ವಜ ಕಟ್ಟಿ ಸ್ವಯಂ ಸೇವಕರನ್ನು ಸ್ವಾಗತಿಸಲಾಗಿತ್ತು.






ಕಾಂಗ್ರೆಸ್ ಮುಖಂಡ, ಕೆಎಸ್‌ಆರ್‌ಟಿಸಿ ನಿಗಮದ ಉಪಾಧ್ಯಕ್ಷ ಪೀರಸಾಬ ಕೌತಾಳರ ಅಧ್ಯಕ್ಷತೆಯಲ್ಲಿ ಬೆಟಗೇರಿ ಇದಗಾ ಕಮಿಟಿ ಹಾಗೂ ಕೆ.ಎಚ್. ಪಾಟೀಲ್ ಅಭಿಮಾನಿ ಬಳಗದಿಂದ ಹಜರತ್ ಪ್ರವಾದಿ ಮುಹಮ್ಮದ ಪೈಗಂಬರರ ಜಯಂತ್ಯುತ್ಸವದ ಅಂಗವಾಗಿ ನಗರದ ಇದಗಾ ಮೈದಾನದಲ್ಲಿ ಸೋಮವಾರ 2ನೇ ವರುಷದ ಸರ್ವ ಧರ್ಮ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪೀರಸಾಬ ಕೌತಾಳರನ್ನು ಬದಾಮಿಯಿಂದ ಆಗಮಿಸಿದ್ದ ಅಭಿಮಾನಿಗಳು ಸನ್ಮಾನಿಸಿ, ಗೌರವಿಸಿದರು.

# ನಾಳೆ ಗದಗ ಜಿಲ್ಲೆಗೆ ಇಂಧನ ಸಚಿವ ಕೆ.ಜೆ.ಜಾರ್ಜ್ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರು ಸೆಪ್ಟೆಂಬರ್ 10 ರಂದು ಬೆಳಿಗ್ಗೆ 9 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 10 ಗಂಟೆಗೆ ಗದಗಿಗೆ ಆಗಮಿಸಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡುವರು. ಬೆಳಿಗ್ಗೆ 11.30 ಗಂಟೆಗೆ ಗದಗ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಗದಗ ಜಿಲ್ಲೆಯ ಎಲ್ಲ ಚುನಾಯಿತ ಜನಪ್ರತಿನಿಧಿಗಳೊಂದಿಗೆ ಇಂಧನ ಇಲಾಖೆಗೆ ಸಂಬಂಧಪಟ್ಟಂತೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 2.30 ಗಂಟೆಗೆ ಗದಗದಿಂದ ರಸ್ತೆ ಮೂಲಕ ಹುಬ್ಬಳ್ಳಿಗೆ ರಸ್ತೆ ಮೂಲಕ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.



# ಮದ್ದೂರು ಕಲ್ಲೆಸೆತ ಪ್ರಕರಣ: ಹಿಂದೂಗಳ ಮೇಲೆ ಕೇಸ್ ದಾಖಲಾಗಿಲ್ಲ : ಸಚಿವ ಚಲುವರಾಯಸ್ವಾಮಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮದ್ದೂರು ಕಲ್ಲೆಸೆತ ಪ್ರಕರಣದಲ್ಲಿ ಯಾವ ಹಿಂದೂಗಳ ಮೇಲೂ ಕೇಸ್ ದಾಖಲಾಗಿಲ್ಲ ಎಂದು ಸಚಿವ ಚಲುವರಾಯಸ್ವಾಮಿ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಮೆರವಣಿಗೆ ನಡೆಯುವ ಸಂದರ್ಭದಲ್ಲಿ ಮಸೀದಿ ಕಡೆಯಿಂದ ಕಲ್ಲುಗಳು ಎಸೆದ ಬಗ್ಗೆ ಮಾಹಿತಿ ಇದೆ. ವಿಚಾರಣೆ ನಡೆಸಿ ನಂತರ 21 ಜನರನ್ನು ಬಂಧಿಸಲಾಗಿದೆ. ಪ್ರಕರಣದಲ್ಲಿ ಯಾವ ಹಿಂದೂಗಳ ಮೇಲೂ ಕೇಸ್ ದಾಖಲಾಗಿಲ್ಲ. ಇಷ್ಟು ಬೇಗ ಕ್ರಮ ತೆಗೆದುಕೊಂಡ ಪ್ರಕರಣ ಬೇರೆ ಯಾವುದೂ ಇಲ್ಲ. ಆದರೆ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಪ್ರಚೋದಿಸುತ್ತಿದ್ದಾರೆ. ಇನ್ನಷ್ಟು ಬಿಗಿಕ್ರಮಗಳನ್ನು ತೆಗೆದುಕೊಳ್ಳಲು ಹೇಳಬಹುದಿತ್ತು. ಅದು ಬಿಟ್ಟು ಕೋಮುಗಲಭೆಗೆ ಪ್ರಚೋದನೆ ಕೊಡುವುದು ಸರಿಯಲ್ಲ ಎಂದರು.

ಮದ್ದೂರಿನಲ್ಲಿ ಹಿಂದೆ ಎಂದೂ ಈ ರೀತಿ ನಡೆದಿರಲಿಲ್ಲ. ಹೊರಗಡೆಯಿಂದ ಬಂದು ಯಾರೋ ಗಲಭೆ ಮಾಡಿರಬಹುದು ಎಂಬುದನ್ನೂ ವಿಚಾರಣೆ ಮಾಡುತ್ತಿದ್ದೇವೆ. ಯಾವುದೇ ಸಮಾಜವಿದ್ದರೂ ಅವರ ಮೇಲೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ. ಬಿಜೆಪಿ, ಜೆಡಿಎಸ್‌ನವರು ರಾಜಕೀಯವಾಗಿ ನಮ್ಮನ್ನು ಎದುರಿಸಲು ಆಗದೇ ಪ್ರಚೋದನೆ ಮಾಡುತ್ತಿದ್ದಾರೆ. ನಾವು ಯಾರ ಓಲೈಕೆಯನ್ನ ಕೂಡ ಮಾಡುತ್ತಿಲ್ಲ.

ಹಾಗಿದ್ರೆ ಯಾಕೆ 21 ಜನರ ಬಂಧನ ಮಾಡುತ್ತಿದ್ದೆವು? ಇದು ಪೂರ್ವ ನಿಯೋಜಿತ, ನಮಗೆ ಎಲ್ಲ ಗೊತ್ತಿದೆ. ಈ ಹಿಂದೆ ಮಂಗಳೂರಿನಿಂದ ಪಾಂಡವಪುರಕ್ಕೆ ಬಂದು ಏನು ನಡೆಸಿದ್ರು ಗೊತ್ತಿದೆ ನಮಗೆ. ನಾಗಮಂಗಲದಲ್ಲೂ ನಡೆಸಿದ್ರು, ಈ ಸಲ ಎಚ್ಚರಿಕೆ ವಹಿಸಿದ್ದೇವೆ ಎಂದು ಹೇಳಿದರು.

### ಪತ್ರಕರ್ತರ ತರಬೇತಿಗಾಗಿ ಇನ್ಫೋಸಿಸ್ ಸ್ಪ್ರಿಗ್‌ಬೋರ್ಡ್-ಕರ್ನಾಟಕ ಮಾಧ್ಯಮ ಅಕಾಡೆಮಿ ಒಡಂಬಡಿಕೆ

# ವೃತ್ತಿಪರರ ಕೌಶಲ್ಯ ಉನ್ನತೀಕರಣದ ಹೆಜ್ಜೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ದೇಶದಲ್ಲಿಯೇ ಮೊದಲ ಬಾರಿಗೆ ಜಾಗತಿಕ ಮಟ್ಟದಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದ ದಿಗ್ಗಜ ಇನ್ಫೋಸಿಸ್‌ನ ಸ್ಪ್ರಿಂಗ್‌ಬೋರ್ಡ್ ಸಿಎಸ್‌ಆರ್ ಕಾರ್ಯಕ್ರಮದಡಿ ಸಹಭಾಗಿತ್ವಕ್ಕಾಗಿ ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರ ತರಬೇತಿಗಾಗಿ ಒಡಂಬಡಿಕೆ ಮಾಡಿಕೊಂಡಿದೆ.

ಪತ್ರಕರ್ತರ ಸಾಫ್ಟ್‌ಸ್ಕಿಲ್ ತರಬೇತಿಯ ಉದ್ದೇಶಕ್ಕಾಗಿ ಮಾಡಿಕೊಳ್ಳುತ್ತಿರುವ ಈ ಒಡಂಬಡಿಕೆಯು ಸಿ.ಎಸ್.ಆರ್ ಅಡಿ ಕರ್ನಾಟಕ ಮಾಧ್ಯಮ ಅಕಾಡೆಮಿ ಕೈಗೆತ್ತಿಕೊಂಡ ಮೊದಲ ಕಾರ್ಯಕ್ರಮವಾಗಿದೆ. ಇನ್ಫೋಸಿಸ್ ಸಿ.ಎಸ್.ಆರ್ ಯೋಜನೆಯ 'ಸ್ಪ್ರಿಂಗ್‌ಬೋರ್ಡ್' ಪ್ಲಾಟ್‌ಫಾರ್ಮ್ ಮೂಲಕ ಪತ್ರಕರ್ತರ ಡಿಜಿಟಲ್ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸಾಮರ್ಥ್ಯ ನಿರ್ಮಾಣ ಈ ಒಡಂಬಡಿಕೆಯ ಉದ್ದೇಶವಾಗಿದೆ.



ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯೇಶಾ ಖಾನಂ ಈ ಸಂದರ್ಭದಲ್ಲಿ ಮಾತನಾಡಿ, ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಹಭಾಗಿತ್ವವು ಬದಲಾಗುತ್ತಿರುವ ಹೊಸ ಮಾಧ್ಯಮಕ್ಕೆ ಹೊಂದಿಕೊಳ್ಳುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ವಿನೂತನ ಪ್ಲಾಟ್‌ಫಾರಂ ಮಾಧ್ಯಮ ವೃತ್ತಿಪರರ ಕೌಶಲ್ಯ ಉನ್ನತೀಕರಣಕ್ಕೆ, ವಿಶೇಷವಾಗಿ ಪತ್ರಕರ್ತರಿಗೆ ತಾಂತ್ರಿಕ ಪರಿಣತಿ ಹಾಗೂ ಸುದ್ದಿಯನ್ನು ಪ್ರಸ್ತುತಪಡಿಸುವ ಕೌಶಲವನ್ನು ಒದಗಿಸಲಿದೆ ಎಂದರು.

ಇನ್ಫೋಸಿಸ್‌ನ ಹಿರಿಯ ಉಪಾಧ್ಯಕ್ಷ (ಇಟಿಎ) ಸತೀಶ ಬಿ.ನಂಜಪ್ಪ ಮಾತನಾಡಿ, ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಶಿಕ್ಷಣ ಕುರಿತ ಸಿಎಸ್‌ಆರ್ ಕಾರ್ಯಕ್ರಮವಾಗಿದ್ದು, ಇಂದು ಮಾಧ್ಯಮ ಅಕಾಡೆಮಿಯೊಂದಿಗೆ ಒಡಂಬಡಿಕೆಗೆ ಸಹಿ ಹಾಕಿದೆ. ಮಾಧ್ಯಮ ಅಕಾಡೆಮಿಗೆ ಸ್ಪ್ರಿಗ್‌ಬೋರ್ಡ್‌ನ ಡಿಜಿಟಲ್ ವಿಷಯಗಳಿಗೆ ಪ್ರವೇಶ ಲಭಿಸಲಿದೆ ಮತ್ತು ಅವರು ಸಾಫ್ಟ್ ಸ್ಕಿಲ್‌ಗಳು, ವ್ಯಕ್ತಿತ್ವ ವಿಕಾಸ ಹಾಗೂ ಕೃತಕ ಬುದ್ಧಿಮತ್ತೆ ಸೇರಿದಂತೆ ಇತ್ತೀಚಿನ ತಂತ್ರಜ್ಞಾನಗಳ ಅವಲೋಕನ ಕುರಿತ ವಿಷಯಗಳಿಂದ ಪ್ರಯೋಜನ ಪಡೆಯಬಹುದು. ಇದು ವಿಶೇಷವಾಗಿ 2ನೇ ಹಾಗೂ 3ನೇ ಹಂತದ ನಗರಗಳ ಪತ್ರಕರ್ತರಿಗೆ ಖಂಡಿತವಾಗಿಯೂ ಸಹಾಯಕವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ, ಸದಸ್ಯ ಹೆಚ್.ವಿ. ಕಿರಣ್, ಇನ್ಫೋಸಿಸ್ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಸತೀಶ ಬಿ.ನಂಜಪ್ಪ, ಹಿರಿಯ ಅಧಿಕಾರಿಗಳಾದ ಸಂತೋಷ್ ಅನಂತಪುರ, ಬಿಳಿಗಿರಿ ರಂಗ ಮೊದಲಾದವರು ಉಪಸ್ಥಿತರಿದ್ದರು.

> ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಕಾರ್ಯಕ್ರಮದಡಿ ಪತ್ರಕರ್ತರಿಗೆ ಮೂರು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಇದರಲ್ಲಿ ಡಿಜಿಟಲ್ ಮಾಧ್ಯಮಕ್ಕೆ ಅಗತ್ಯ ಕೌಶಲ್ಯಗಳು, ಕೃತಕ ಬುದ್ಧಿಮತ್ತೆಯ ಬಳಕೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಿಸಿದಂತೆ ತರಬೇತಿ ನೀಡಲಾಗುವುದು. ಈ ವರ್ಷದಲ್ಲಿ ಒಟ್ಟು ಮೂರು ಕಾರ್ಯಕ್ರಮಗಳ ಮೂಲಕ ಒಟ್ಟು 150 ಪತ್ರಕರ್ತರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಇದರಲ್ಲಿ ವಿಶೇಷವಾಗಿ ಒಂದು ಬ್ಯಾಚ್‌ನಲ್ಲಿ ಮಹಿಳಾ ಆಯವ್ಯಯದಡಿ ಪತ್ರಕರ್ತೆಯರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಜಿಲ್ಲಾ ಮಟ್ಟದ ಪತ್ರಕರ್ತರಿಗೆ ಈ ತರಬೇತಿಯಲ್ಲಿ ಆದ್ಯತೆ ನೀಡಲಾಗುವುದು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka